ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ
NIMMURU SUDDI

ಸಂಪಾದಕರು: ಸುಂದರ್
Editor : Sundar

ಏಕ ಕಾಲಕ್ಕೆ
ಬಳ್ಳಾರಿ,
ಕೊಪ್ಪಳ,
ಯಾದಗಿರಿ,
ರಾಯಚೂರು,
ಕಲಬುರ್ಗಿ,
ಬೀದರ,
ವಿಜಯನಗರ
ಜಿಲ್ಲೆಗಳಲ್ಲಿ ಪ್ರಕಟ

Volume: 01,	Issue: 68	RNI Number : KNKAN/25/A2770	16-03-2026	Monday	Page 04,	Price 2/-	suddinimmuru@gmail.com	Mob:-8660146563
ಸಂಪುಟ :01	ಸಂಚಿಕೆ :68	ರಾಯಚೂರು	16-03-2026	ಸೋಮವಾರ	ಪುಟ 04	ಬೆಲೆ ರೂ.2/-		ಮೊ:8660146563

4 ರಾಜ್ಯ, ಒಂದು ಕೇಂದ್ರಾಡಳಿತ ಪ್ರದೇಶದ ಚುನಾವಣೆಯ ದಿನಾಂಕ ಘೋಷಣೆ

ನವದೆಹಲಿ: ಪಶ್ಚಿಮ ಬಂಗಾಳ, ಅಸ್ಸೋಂ, ತಮಿಳುನಾಡು, ಕೇರಳ ಮತ್ತು ಕೇಂದ್ರಾಡಳಿತ ಪ್ರದೇಶ ಪುದುಚೇರಿ ವಿಧಾನಸಭಾ ಚುನಾವಣೆ ಸೇರಿದಂತೆ ಕರ್ನಾಟಕದ ಎರಡು ಕ್ಷೇತ್ರಗಳ ಉಪಚುನಾವಣೆಯ ದಿನಾಂಕವನ್ನು ಇಂದು ಕೇಂದ್ರ ಚುನಾವಣಾ ಆಯೋಗ ಘೋಷಿಸಿದೆ.

ನವದೆಹಲಿಯ ವಿಜ್ಞಾನ ಭವನದಲ್ಲಿ ಕರೆದ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಭಾರತದ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರು ನಾಲ್ಕು ರಾಜ್ಯಗಳು ಮತ್ತು ಒಂದು ಕೇಂದ್ರಾಡಳಿತ ಪ್ರದೇಶದ ವಿಧಾನಸಭಾ ಚುನಾವಣೆ ಮತ್ತು ಉಪಚುನಾವಣೆಯ ದಿನಾಂಕವನ್ನು ಇಂದು ಪ್ರಕಟಿಸಿದ್ದಾರೆ.

ಪಶ್ಚಿಮ ಬಂಗಾಳದಲ್ಲಿ ಎರಡು ಹಂತದ ಮತದಾನ: ಪಶ್ಚಿಮ ಬಂಗಾಳದಲ್ಲಿ ಎಪ್ರಿಲ್ 23 ಮತ್ತು 29 ರಂದು ಎರಡು ಹಂತದಲ್ಲಿ ಮತದಾನ ನಡೆಯಲಿದೆ. ತಮಿಳುನಾಡು, ಅಸ್ಸೋಂ, ಪುದುಚೇರಿ ಮತ್ತು ಕೇರಳದಲ್ಲಿ ಒಂದೇ ಹಂತದಲ್ಲಿ ಮತದಾನವಾಗಲಿದೆ. ಮೇ 4 ರಂದು ಫಲಿತಾಂಶ ಹೊರಬೀಳಲಿದೆ ಎಂದು ಮುಖ್ಯ ಚುನಾವಣಾ ಆಯುಕ್ತರು ತಿಳಿಸಿದ್ದಾರೆ.

ಈ ರಾಜ್ಯಗಳಿಗೆ ಒಂದೇ ಹಂತದಲ್ಲಿ ಮತದಾನ: ತಮಿಳುನಾಡಿನಲ್ಲಿ

ಪ. ಬಂಗಾಳದಲ್ಲಿ 2 ಹಂತ, ಉಳಿದೆಡೆ ಒಂದೇ ಹಂತದಲ್ಲಿ ಮತದಾನ



ಎಪ್ರಿಲ್ 23 ರಂದು ಹಾಗೂ ಪುದುಚೇರಿ, ಕೇರಳ ಮತ್ತು ಅಸ್ಸೋಂನಲ್ಲಿ ಎಪ್ರಿಲ್ 9 ರಂದು ಒಂದೇ ಹಂತದಲ್ಲಿ ಮತದಾನ ನಡೆಯಲಿದೆ.

ನಾಲ್ಕು ರಾಜ್ಯಗಳು ಮತ್ತು ಒಂದು ಕೇಂದ್ರಾಡಳಿತ ಪ್ರದೇಶದ 824 ವಿಧಾನಸಭಾ ಸ್ಥಾನಗಳಿಗೆ ಮತದಾನ ನಡೆಯಲಿದ್ದು, ಮೇ 4 ರಂದು ಫಲಿತಾಂಶ ಪ್ರಕಟವಾಗಲಿದೆ ಎಂದು ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಮಾಹಿತಿ ನೀಡಿದ್ದಾರೆ.

ಹಿಂಸಾಚಾರ ಅಥವಾ ಪ್ರಚೋದನೆಯಿಂದ ಚುನಾವಣೆಗಳು ಮುಕ್ತವಾಗಿರುವಂತೆ ಕ್ರಮ ಕೈಗೊಳ್ಳುತ್ತೇವೆ. ಯಾವುದೇ ಉಲ್ಲಂಘನೆಯ ವಿರುದ್ಧ ಚುನಾವಣಾ ಆಯೋಗವು ಕಠಿಣ ಕ್ರಮ ಕೈಗೊಳ್ಳಲಿದೆ ಎಂದು ಇಬ್ಬರು ಚುನಾವಣಾ ಆಯುಕ್ತರಾದ ಸುಖ್ಬೀರ್ ಸಿಂಗ್ ಸಂಧು ಮತ್ತು ವಿವೇಕ್ ಜೋಶಿ ಜೊತೆಗಿದ್ದ ಜ್ಞಾನೇಶ್ ಕುಮಾರ್ ಎಚ್ಚರಿಕೆ ನೀಡಿದರು.

ನೀತಿ ಸಂಹಿತೆ ಜಾರಿ: ಚುನಾವಣಾ ವೇಳಾಪಟ್ಟಿ ಘೋಷಣೆ ಜೊತೆಗೆ ಮಾದರಿ ನೀತಿ ಸಂಹಿತೆಯೂ ಚುನಾವಣೆ ಘೋಷಣೆಯಾದ ಎಲ್ಲ ರಾಜ್ಯಗಳಲ್ಲಿಯೂ ತಕ್ಷಣದಿಂದ ಜಾರಿಗೆ ಬಂದಿದೆ.

ರಾಜ್ಯವಾರು ವಿಧಾನಸಭಾ ಕ್ಷೇತ್ರಗಳ ಮಾಹಿತಿ:
ತಮಿಳುನಾಡಲ್ಲಿ - 234 ಕ್ಷೇತ್ರಗಳು
ಪಶ್ಚಿಮ ಬಂಗಾಳ - 294 ಕ್ಷೇತ್ರಗಳು
ಕೇರಳ - 140 ಕ್ಷೇತ್ರಗಳು
ಅಸ್ಸೋಂ - 126 ಕ್ಷೇತ್ರಗಳು
ಪುದುಚೇರಿಯಲ್ಲಿ 33 ಕ್ಷೇತ್ರಗಳಿವೆ.

ಈ ಎಲ್ಲಾ ರಾಜ್ಯಗಳು ಮತ್ತು ಒಂದು ಕೇಂದ್ರಾಡಳಿತ ಪ್ರದೇಶದಲ್ಲಿ ಒಟ್ಟು 17.4 ಕೋಟಿ ಮತದಾರರು ತಮ್ಮ ಹಕ್ಕನ್ನು ಚಲಾಯಿಸಲಿದ್ದಾರೆ. ಹಾಗೆಯೇ 2.18 ಲಕ್ಷಕ್ಕೂ ಹೆಚ್ಚು ಮತಗಟ್ಟೆ ಸ್ಥಾಪಿಸಲಾಗುವುದು ಹಾಗೂ ಸುಮಾರು 25 ಲಕ್ಷ ಚುನಾವಣಾ ಅಧಿಕಾರಿಗಳನ್ನು ಕರ್ತವ್ಯಕ್ಕೆ ನಿಯೋಜಿಸಲಾಗುವುದು ಎಂದು ಅವರು ವಿವರಿಸಿದರು.

ಎಲ್ಲ ಮತಗಟ್ಟೆಗಳಲ್ಲಿ ಮೊದಲ ಬಾರಿಗೆ ಶೇ.100ರಷ್ಟು ವೆಬ್‌ಕಾಸ್ಟಿಂಗ್ ಮಾಡಲಾಗುತ್ತದೆ. ಜೊತೆಗೆ ಕುಡಿಯುವ ನೀರು ಸೇರಿದಂತೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗುವುದು ಎಂದು ಚುನಾವಣಾ ಆಯುಕ್ತ ತಿಳಿಸಿದರು.

4 ರಾಜ್ಯ, 1 ಕೇಂದ್ರಾಡಳಿತ ಪ್ರದೇಶದ ಚುನಾವಣಾ ಪ್ರಕ್ರಿಯೆಯನ್ನು ವೀಕ್ಷಿಸಲು ಸುಮಾರು 20 ದೇಶಗಳ ವೀಕ್ಷಕರು ಭಾರತಕ್ಕೆ ಭೇಟಿ ನೀಡಲಿದ್ದಾರೆ ಎಂದು ಅವರು ತಿಳಿಸಿದರು.

ಕರ್ನಾಟಕದ ಎರಡು ಕ್ಷೇತ್ರಗಳಿಗೆ

3ನೇ ಪುಟ.....

17: ಪುನೀತ್ ರಾಜಕುಮಾರ 51 ನೇ ಹುಟ್ಟುಹಬ್ಬ:ಸಂಗೀತ ಕಾರ್ಯಕ್ರಮ

ರಾಯಚೂರು,ಮಾ.15-

ಪವರ್‌ಸ್ಟಾರ್ ಪುನೀತ್ ರಾಜ ಕುಮಾರ ರವರ 51 ನೇ ವರ್ಷದ ಹುಟ್ಟುಹಬ್ಬದ ಅಂಗವಾಗಿ ಸಂಗೀತ ಕಾರ್ಯಕ್ರಮವನ್ನು ದಿ, 17ರಂದು ಜಂಬಲದಿನ್ನಿ ರಂಗಮಂದಿರಲ್ಲು ಸಂಜೆ 5 ಗಂಟೆಗೆ ಆಯೋಜಿಸಲಾಗಿದೆ ಎಂದು ಮೋಹನ್ ಮೆಲೋಡಿಸ್ ಸಿಂಗಿಂಗ್ ಕರೋಕೆ ಸ್ಟುಡಿಯೋದ ಮೋಹನ್ ವಕೀಲರು ಹೇಳಿದರು.

ನಗರದ ಪತ್ರಿಕಾಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತ ನಾಡಿ, ಉದ್ಘಾಟನೆಯನ್ನು ಬಿ.ಜೆ.ಪಿ ಮುಖಂಡರು ಎನ್. ಶಿವಕುಮಾರ್ ಮಾಡಲಿದ್ದಾರೆ.ಅಧ್ಯಕ್ಷತೆ ಯನ್ನು ರೆಡ್ಡಿ ತಿಮ್ಮಯ್ಯ ವಕೀಲರು ವಹಿಸ ಲಿದ್ದಾರೆ.

ಅತಿಥಿಗಳಾಗಿ ಈರಣ್ಣ ವಕೀಲರು,ಮಹಮ್ಮದ್ ಜುನೀರ್ ಅಬ್ಬಾಸ್ ಬಿ.ಪಿ.ಎಂ. ರಾಯಚೂರು



ಡೆವಲಪ್ ಮೆಂಟ್ ಅಥೋರಿಟಿ. ಅಬ್ದುಲ್ ಖಾದರ್ ನಿವೃತ್ತ ಪಿ.ಎಸ್.ಐ ಡಾರಾಜಕುಮಾರ್ ಸಂಘದ ಹಿರಿಯ ಅಭಿಮಾನಿಗಳು

ಶ್ರೀನಿವಾಸ್ ಯಾದವ್ ಎ.ಎಸ್.ಐ ಸದರ್‌ಬಜಾರ್ ಪೋಲೀಸ್ ಠಾಣೆ, ಶೇಖರ್ ವಿಧ್ಯಾನಗರ ರಿಯಲ್ ಎಸ್ಟೇಟ್ ಉದ್ಯಮಿ ಜಿ. ರವಿಕುಮಾರ್ ಡಾರಾಜಕುಮಾರ್ ಸಂಘದ ಹಿರಿಯ ಅಭಿಮಾನಿಗಳು, ಮಲ್ಲಣ್ಣ ಹರವಾಳ ವಕೀಲರು ಹಾಗೂ ಹಿರಿಯ ಸಾಹಿತಿಗಳು, ಪ್ರಕಾಶ್ ವಕೀಲರು

ಜಿಲ್ಲಾ ಕಾರಾಗೃಹ ಸದಸ್ಯರು ಆಗಮಿಸಲಿದ್ದಾರೆಂದರು. ಕಾರ್ಯಕ್ರಮಕ್ಕೆ ಉಚಿತ ಪ್ರವೇಶವಿದೆ ಎಂದರು.

ಈ ಸಂದರ್ಭದಲ್ಲಿ ಬಿಜೆಪಿ ಮುಖಂಡ ಮಹ್ಮದ್ ಹನೀಫ್, ಲಕ್ಷ್ಮಿರೆಡ್ಡಿ ಉಪಸ್ಥಿತರಿದರು.

ಇಸ್ರೇಲ್-ಇರಾನ್ ಯುದ್ಧ ಪರಿಣಾಮ: ಯಾದಗಿರಿ ಆಯ್ತು ಈಗ ರಾಯಚೂರಿನ ರೈಸ್ ಮಿಲ್‌ಗಳಿಗೂ ಆರ್ಥಿಕ ಸಂಕಷ್ಟ!

ರಾಯಚೂರು, ಮಾ.15

ಇಸ್ರೇಲ್-ಇರಾನ್ ಯುದ್ಧದ ಪರಿಣಾಮವಾಗಿ, ಕರ್ನಾಟಕದ ಭತ್ತದ ನಾಡು ರಾಯಚೂರಿನ ರೈಸ್ ಮಿಲ್‌ಗಳು ತೀವ್ರ ಆರ್ಥಿಕ ಸಂಕಷ್ಟವನ್ನು ಎದುರಿಸುತ್ತಿವೆ. ವಿದೇಶಗಳಿಗೆ ರಫ್ತಾಗುತ್ತಿದ್ದ ಅಪಾರ ಪ್ರಮಾಣದ ಅಕ್ಕಿ ಸಾಗಾಟ ಸಂಪೂರ್ಣ ಸ್ಥಗಿತಗೊಂಡಿದ್ದು, ರೈಸ್ ಮಿಲ್ಲರ್ಸ್ ಅಸೋಸಿಯೇಷನ್ ಆತಂಕ ವ್ಯಕ್ತಪಡಿಸಿದೆ. ರಾಯಚೂರಿ ನಿಂದ ಯುರೋಪ್, ಅರಬ್, ಆಫ್ರಿಕಾ ಮತ್ತು ಅಮೆರಿಕ ಸೇರಿದಂತೆ ಹಲವು ದೇಶಗಳಿಗೆ ಸೋನಾಮಸೂರಿ ಮತ್ತು ಆರ್.ಎನ್.ಆರ್‌ನಂತಹ ಉತ್ತಮ ಗುಣಮಟ್ಟದ ಅಕ್ಕಿ ರಫ್ತಾಗುತ್ತಿತ್ತು.

ಸದ್ಯ ಮಾರುಕಟ್ಟೆಯಲ್ಲಿ ಬೇಡಿಕೆ ಕುಸಿದಿರುವುದರಿಂದ ಲಕ್ಷಾಂ ತರ ಟನ್ ಅಕ್ಕಿ ಮಿಲ್‌ಗಳಲ್ಲಿ ದಾಸ್ತಾ ನಾಗಿದೆ. ಇದು ಮುಂದುವರಿದರೆ ಮಿಲ್‌ಗಳು ಬಂದ್ ಆಗುವ ಅಪಾಯವಿದೆ. ಸಾಲಗಳು, ನೌಕರರ ವೇತನ ಮತ್ತು ನಿರ್ವಹಣಾ ವೆಚ್ಚಗಳು ರೈಸ್ ಮಿಲ್ ಮಾಲೀಕರಿಗೆ ದೊಡ್ಡ ಹೊರೆಯಾಗಿ ಪರಿಣಮಿಸಿವೆ. ಈ ಪರಿಸ್ಥಿತಿ ಏಪ್ರಿಲ್‌ನಲ್ಲಿ ಹೊಸ ಬತ್ತದ ಫಸಲು ಬಂದಾಗ ರೈತರಿಗೂ ಆರ್ಥಿಕ ಸಂಕಷ್ಟ ತರಲಿದೆ ಎಂದು ರೈಸ್ ಮಿಲ್ಲರ್ಸ್ ಅಸೋಸಿಯೇಷನ್‌ನ ರಾಜ್ಯ ಕಾರ್ಯಾಧ್ಯಕ್ಷ ಸಾವಿತ್ರಿ ಪುರುಷೋತ್ತಮ್ ತಿಳಿಸಿ ದ್ದಾರೆ. ಯುದ್ಧ ಪರಿಸ್ಥಿತಿ ಮುಂದು ವರಿದರೆ ರಾಜ್ಯದಾದ್ಯಂತ 2000ಕ್ಕೂ ಹೆಚ್ಚು ರೈಸ್ ಮಿಲ್‌ಗಳು ಮತ್ತು ಲಕ್ಷಾಂತರ ರೈತರು ತೀವ್ರವಾಗಿ ಬಾಧಿತರಾಗಲಿದ್ದಾರೆ.

ಮಾನಸಿಕವಾಗಿ ಭಾವನಾತ್ಮಕವಾಗಿ ಸದೃಢ ರಾಗಬೇಕಾಗಿದೆ - ಕಿಲ್ಲೆಶ್ರೀ



ರಾಯಚೂರು,ಮಾ.14 -

ಇತ್ತೀಚಿನ ದಿನಗಳಲ್ಲಿ ಜಿಲ್ಲಾ ಕಾರಾಗೃಹದ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಮಾನಸಿಕವಾಗಿ ಭಾವನಾತ್ಮಕವಾಗಿ ಸದೃಢರಾಗಬೇಕಾಗಿದೆ ಎಂದು ಸಾವಿರಾದೇವರ ಸಂಸ್ಥಾನದ ಕಿಲ್ಲೆ ಬೃಹನ್ಮಠದ ಶ್ರೀಗಳಾದ ಷ ಬ್ರ ಶಾಂತವಲ್ಲ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು ಶನಿವಾರ ರಾತ್ರಿ ಕಾರಾಗೃಹ ಮತ್ತು ಸುಧಾರಣೆ ಸೇವೆ ಇಲಾಖೆ, ಜಿಲ್ಲಾ ಕಾರ್ಯಗೃಹ ಅಧಿಕಾರಿ ಮತ್ತು ಸಿಬ್ಬಂದಿಯವರ ಕುಟುಂಬ ಕಲ್ಯಾಣ ದಿನಚರಣೆ 2026ರ ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸಿ ಹಿತವಚನಗಳನ್ನು ಹೇಳಿದರು ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ ಮಾತನಾಡುತ್ತಾ ಕಾರಾಗೃಹದಲ್ಲಿ ಅಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿದ್ದು ದಿನಾಚರಣೆಯನ್ನು ಆಚರಿಸಬೇಕೆಂದು ಅಭಿಪ್ರಾಯಪಟ್ಟರು ಮಾನಸಿಕ ಸ್ಥೈರ್ಯ ಕೊಡುತ್ತದೆ ಎಂದರು ಕರ್ತವ್ಯದಲ್ಲಿರುವ ಸಮಸ್ಯೆಗಳನ್ನು

3ನೇ ಪುಟ.....

ಆಲಮಟ್ಟಿ ಡ್ಯಾಮ್ ಎತ್ತರಿಸಲು ನಮ್ಮ ಹೋರಾಟಕ್ಕೆ ಬಜೆಟ್ನಲ್ಲಿ ಸಕಾರಾತ್ಮಕ ಸ್ಪಂದನೆ: ಮುಜಾಹಿದ್ ಮರ್ಚೆಡ್

ರಾಯಚೂರು,ಮಾ.15-

ರಾಷ್ಟ್ರೀಯ ರೈತ ದಿನಾಚರಣೆ ಅಂಗವಾಗಿ ಇಂದು ಶನಿವಾರ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ರೈತ ಸೇನೆ (ರಿ) ರಾಯಚೂರು ಜಿಲ್ಲಾ ಘಟಕದವತಿಯಿಂದ ಜಿಲ್ಲಾ ಅಧ್ಯಕ್ಷರಾದ ಇಂದ್ರಜೀತ್ ಯಾದವ್ ಹಾಗೂ ಜಿಲ್ಲಾ ಕಾರ್ಯಾಧ್ಯಕ್ಷರಾದ ಮುಜಾಹಿದ್ ಮರ್ಚೆಡ್ ಇವರ ನೇತೃತ್ವದಲ್ಲಿ ಹಮ್ಮಿಕೊಂಡ 'ರೈತರಿಗೆ ಶರಣರಿಂದ ಹಿತನುಡಿ, ಕೃಷಿ ತಂತ್ರಜ್ಞರಿಂದ ಸಲಹೆ ಹಾಗೂ ಬೃಹತ್ ಉಚಿತ ಆರೋಗ್ಯ ತಪಾಸಣೆ' ಶಿಬಿರ ಕಾರ್ಯಕ್ರಮವನ್ನು ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್



ವೃತ್ತದಲ್ಲಿ ಶ್ರೀ ಶ್ರೀ ಶಾಂತಮಲ್ಲ ಶಿವಚಾರ್ಯರು ಮಹಾಸ್ವಾಮಿಗಳ ಸಾನಿಧ್ಯದಲ್ಲಿ ಪ್ರಾರಂಭವಾಗಿ ಸಣ್ಣ ನೀರಾವರಿ ಸಚಿವರಾದ ಶ್ರೀ ಎನ್.ಎಸ್.ಬೋಸರಾಜು ಇವರು ಎತ್ತಿನ ಬಂಡಿ ಚಾಲನೆ ಮಾಡುವ ಮೂಲಕ ಉಧ್ಘಾಟಿಸಿದ ನಂತರ ಸಂವಿಧಾನ ಶಿಲ್ಪಿಗೆ ರಾಜ್ಯ ಅಧ್ಯಕ್ಷರಾದ ಶಾಂತಗೌಡ ಚನ್ನಪಟ್ಟಣ ಹಾಗೂ ಉಪಾಧ್ಯಕ್ಷರಾದ ಲಕ್ಷ್ಮಿಕಾಂತ ಎ.ಪಾಟಿಲ್, ಇಂದ್ರಜೀತ್ ಯಾದವ್, ಮುಜಾಹಿದ್ ಮರ್ಚೆಡ್ ಇವರುಗಳು ಹಾರ ಹಾಕಿ ಸಂವಿದಾನ ಶಿಲ್ಪಿ ಹಾಗೂ ಅನ್ನದಾತರಿಗೆ ಜೈಕಾರ ಹಾಕಿ ಮೆರವಣಿಗೆ ಮೂಲಕ ರಂಗಮಂದಿಕ್ಕೆ ತಲುಪಿದ ನಂತ ರ ಮೊದಲಿಗೆ ಶ್ರೀದೇವಿ ಆರ್. ನಾಯಕ್ ಹಾಗೂ ರೂಪ ಶ್ರೀನಿವಾಸ ನಾಯಕ ಜ್ಯೋತಿ ಬೆಳಗಿಸಿದ ನಂತರ, ಮಲ್ಲಿಕಾರ್ಜುನ ಪಾಟೀಲ್ ಹಾಗೂ ಮಹಾದೇವ ಯಾದವ್ ನೇಗಿಲ ಪೂಜೆಯನ್ನು ಮಾಡಿದ ನಂತರ , ಆನಂದ ಕುಮಾರ್ ಮಡಿವಾಳರ್ ಹಾಗೂ ಸುರೇಶ್ ಪೂಜಾರಿ ಇವರು ಚೌದರಿ ಚರಣಸಿಂಗ್ ಹಾಗೂ ನಂಜುಂಡ ಸ್ವಾಮಿ ಭಾವಚಿತ್ರಕ್ಕೆ ಪೂಜೆ ಮಾಡಿದ

3ನೇ ಪುಟ.....

ವಿದ್ಯಾರ್ಥಿಗಳ ಏಳಿಗೆಯಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಗಳ ಪಾತ್ರ ಮಹತ್ವದ್ದು; ಅಭಿನವಶ್ರೀ



ಸಿರವಾರ,ಮಾ.15-

ವಿದ್ಯಾರ್ಥಿಗಳ ಏಳಿಗೆಯಲ್ಲಿ ಖಾಸಗಿ ಶಿಕ್ಷಣ ಸಂಸ್ಥೆ ಗಳ ಪಾತ್ರ ಮಹತ್ವದ್ದು,ಸಂಸ್ಥೆಯಲ್ಲಿ ಕಲಿತ ವಿದ್ಯಾರ್ಥಿಗಳು ಉನ್ನತಮಟ್ಟಕ್ಕೆ ಬೆಳೆದಾಗ ಸಂಸ್ಥೆಯ ಸೇವೆ ಸಾರ್ಥಕವಾಗುತ್ತದೆ. ಮಕ್ಕಳ ಏಳಿಗೆಗಾಗಿ ಹಗಲಿರುಳು ಶ್ರಮಿಸುತ್ತಿರುವ ಸಂಸ್ಥೆಯ ಮುಖ್ಯಸ್ಥ ದಂಪತಿಗಳ ಸೇವೆಗೆ ಆ ಭಗವಂತನ ಆಶೀರ್ವಾದ ಇರಲಿ, ಸಂಸ್ಥೆ ಮತ್ತಷ್ಟು ಎತ್ತರಕ್ಕೆ ಬೆಳೆಯಲಿ ಎಂದು ನವಲಕಲ್ ಬೃಹನ್ಮಠದ ಪೂಜ್ಯ ಶ್ರೀ ಅಭಿನವ ಸೋಮನಾಥ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.

ಪಟ್ಟಣದ ಜ್ಞಾನಗಂಗಾ ಶಾಲೆಯಲ್ಲಿ ಶನಿವಾರ ಹಮ್ಮಿಕೊಳ್ಳಲಾದ 10 ನೇ ತರಗತಿ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಶಾಸಕ ಜಿ.ಹಂಪಯ್ಯ ನಾಯಕ ಮಾತನಾಡಿ, ಗ್ರಾಮೀಣ ಭಾಗದ ವಿದ್ಯಾರ್ಥಿಗಳ ಉತ್ತಮ ಸಾಧನೆಗೆ ಶಿಕ್ಷಕರ ಮಾರ್ಗದರ್ಶನ ಕಾರಣ. ಸಂಸ್ಥೆ ಜ್ಞಾನದ ಹಸಿವನ್ನು ನೀಗಿಸಲು ಶ್ರಮಿಸುತ್ತಿದ್ದು, ಅದರ ಸದುಪಯೋಗ ವಿದ್ಯಾರ್ಥಿಗಳು ಪಡೆಯಬೇಕು ಎಂದು ಹೇಳಿದರು.

ಮುಖಂಡರಾದ ಚುಕ್ಕಿ ಸೂಗಪ್ಪ ಸಾಹುಕಾರ ಮಾತನಾಡಿದರು.

ಜ್ಞಾನಗಂಗಾ ಶಾಲೆಯ ಮುಖ್ಯಸ್ಥ ವೆಂಕಟರೆಡ್ಡಿ ಬಲ್ಕಲ್ ಪ್ರಾಸ್ತಾವಿಕವಾಗಿ ಮಾತನಾಡಿದರು.

ರಮೇಶ ದರ್ಶನಕರ ಜೆ.ದೇವರಾಜ ಗೌಡ,ಎಮ್ ಶ್ರೀನಿವಾಸ ಜಾಲಾಪೂರ ಕ್ಯಾಂಪ್,ಮಂತ್ರಜಾತಯ್ಯ ಸ್ವಾಮಿ ಯರಮರಸ ಮಠ,ಅಯ್ಯನಗೌಡ ಏರಡ್ಡಿ,ಡಾ.ಅಜ್ಮೀರ ಪಾಷ, ಪ.ಪಂ ಅಧ್ಯಕ್ಷ ಹಾಜಿ ಚೌದ್ರಿ, ಸದಸ್ಯರಾದ ಹಸೇನಲಿಸಾಬ್,ಮೌಲಸಾಬ್ ವರ್ಚಸ್, ಹಾಗು ನರಸಿಂಹರಾವ್ ಕುಲಕರ್ಣಿ, ಜಂಬಣ್ಣ ನೀಲಗಲ್,ಬಸವರಾಜ

3ನೇ ಪುಟ.....

ಮೆಟ್ಟಿಲು ಕುಸಿದು ದಂಪತಿ ಸಾವು: ಮರೀಗೌಡ್ರು ಭೇಟಿ

ರಾಯಚೂರು,ಮಾ.15-

ಜಿಲ್ಲೆಯ ಲಿಂಗಸಗೂರು ತಾಲೂಕಿನ ಯಲಗಟ್ಟ ಗ್ರಾಮದಲ್ಲಿ ಕಟ್ಟಡ ಕೆಲಸ ಮಾಡುವ ಸಮಯದಲ್ಲಿ ಮೆಟ್ಟಿಲು ಕುಸಿದು ಇಬ್ಬರು ದಂಪತಿಗಳು ಸಾವನಪ್ಪಿದರು, ನೆರವು ಕಾರ್ಮಿಕ ಸಂಘದ ರಾಜ್ಯಾಧ್ಯಕ್ಷರು ಅಶ್ವಥ್ ಮರೀಗೌಡ್ರು, ಅಣ್ಣರವರ ಮಾರ್ಗದರ್ಶನದಲ್ಲಿ ಜಿಲ್ಲಾಧ್ಯಕ್ಷರು ಮತ್ತು ಪದಾಧಿಕಾರಿಗಳು ಸ್ಥಳಕ್ಕೆ ಬೇಟಿ ನೀಡಿ ಮೃತರ ಕುಟುಂಬಕ್ಕೆ ಸಾಂತ್ವನ ಹೇಳಿ, ಕಾರ್ಮಿಕರ ಇಲಾಖೆಯಿಂದ ಬರತಕ್ಕಂತಹ ಸವಲತ್ತುಗಳನ್ನು ಕಾರ್ಮಿಕರ ನಿರೀಕ್ಷಕರಾದ ಶಾಂತ ಮೂರ್ತಿ ರವರನ್ನು ಸ್ಥಳಕ್ಕೆ ಕರೆಯಿಸಿ ಮಂಡಳಿಯಿಂದ ಬರತಕ್ಕಂತಹ ಸೌಲಭ್ಯಗಳನ್ನು ಒದಗಿಸಿ ಕೊಡಬೇಕೆಂದು ಕೋರಲಾಯಿತು, ಇದಕ್ಕೆ ಸ್ಪಂದಿಸಿದ ಕಾರ್ಮಿಕ ನಿರೀಕ್ಷಕರು ಶಾಂತ ಮೂರ್ತಿ ರವರು ಕಾನೂನು ರೀತಿಯಲ್ಲಿ ಇಲಾಖೆಯಿಂದ ಸಿಗುವ ಸವಲತ್ತುಗಳನ್ನು ಒದಗಿಸಿ ಕೊಡಲಾಗುವುದು ಎಂದು ಹೇಳಿದರು, ಈ ಸಂಧರ್ಭದಲ್ಲಿ ನೆರವು ಕಾರ್ಮಿಕರ ಸಂಘದ ಜಿಲ್ಲಾ ಅಧ್ಯಕ್ಷರು ವೆಂಕಟೇಶ್ ರಾಠೋಡ್, ಸಿರವಾರ್ ತಾಲೂಕ ಅಧ್ಯಕ್ಷರು ರವಿರಾಜ್,



ಸೋಮನಾಥ್ ನಗರ್ ಗ್ರಾಮ ಘಟಕ ಅಧ್ಯಕ್ಷರು ತಿಪ್ಪಣ್ಣ ನಾಯಕ್, ಮೋಟಾರ್ ಸಾರಿಗೆ ಘಟಕ ಅಧ್ಯಕ್ಷರು ನಾಗರಾಜ್ ನಾಯಕ್, ಆನ್ವರಿ ಗ್ರಾಮ ಘಟಕ ಅಧ್ಯಕ್ಷರು ಗಂಗಪ್ಪ ಬಡಿಗೇರ್ ಗೌಡೂರ್ ಗ್ರಾಮ ಘಟಕ ಅಧ್ಯಕ್ಷರು ತುಳಸಿರಾಮ್ ಅಮರೇಶ್, ನೀರಿನ್ ದೊಡ್ಡಿ ಗ್ರಾಮದ ಎಲ್ಲಾ ಪದಾಧಿಕಾರಿಗಳು, ಮೃತರ ಕುಟುಂಬಸ್ಥರು ಇದ್ದರು.

ಎನ್‌ಎಸ್‌ಎಸ್ ಶಿಬಿರ ಕಾರ್ಯಕ್ರಮ ವರದಿ

ರಾಯಚೂರು,ಮಾ.15-

ಶ್ರೀ ವೆಂಕಟೇಶ್ವರ ಡಿಗ್ರಿ ಕಾಲೇಜು ವತಿಯಿಂದ ನಡೆಯುತ್ತಿರುವ ಎನ್‌ಎಸ್‌ಎಸ್ ವಿಶೇಷ ಶಿಬಿರದ ಅಂಗವಾಗಿ, ಇಂದು ''ಬಾಲ್ಯ ವಿವಾಹವು ಶಿಕ್ಷಾರ್ಹ ಅಪರಾಧ'' ಎಂಬ ವಿಷಯದ ಕುರಿತು ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಲಾಯಿತು.



ಈ ಕಾರ್ಯಕ್ರಮಕ್ಕೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ರಾಯಚೂರು ವತಿಯಿಂದ ಜಿಲ್ಲಾ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಧಿಕಾರಿ ಶ್ರೀ ಭವಸಾಳಿ ಅವರನ್ನು ಮುಖ್ಯ ಅತಿಥಿಯಾಗಿ ಆಹ್ವಾನಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಅವರು ಬಾಲ್ಯ ವಿವಾಹದ ದುಷ್ಪರಿಣಾಮಗಳ ಬಗ್ಗೆ ವಿದ್ಯಾರ್ಥಿಗಳು ಮತ್ತು ಗ್ರಾಮಸ್ಥರಿಗೆ ಜಾಗೃತಿ ಮೂಡಿಸಿದರು. ಬಾಲ್ಯ ವಿವಾಹವು ಕಾನೂನು ಪ್ರಕಾರ ಶಿಕ್ಷಾರ್ಹ ಅಪರಾಧವಾಗಿದ್ದು, ಇದನ್ನು ತಡೆಯುವುದು ಪ್ರತಿಯೊಬ್ಬರ ಜವಾಬ್ದಾರಿ ಎಂದು ತಿಳಿಸಿದರು.

3ನೇ ಪುಟ.....



ಲಿಂಗಸಗೂರು: ರಾಷ್ಟ್ರೀಯ ಗೋರಸೇನಾ ತಾಲ್ಲೂಕು ಘಟಕದ ಪುನಾರಚನೆ. ಹಾಗೂ ತರಬೇತಿ ಶಿಬಿರದ ಕುರಿತು ಸಮಾಲೋಚನಾ ಸಭೆ

ಲಿಂಗಸಗೂರು,ಮಾ.15-

ಪಟ್ಟಣದ ಸರ್ಕಾರಿ ನಿರೀಕ್ಷಣಾ ಮಂದಿರದಲ್ಲಿ ಇಂದು ರಾಷ್ಟ್ರೀಯ ಗೋರಸೇನಾ ತಾಲ್ಲೂಕು ಘಟಕದ ಪ್ರಮುಖ ಸಭೆಯನ್ನು ಆಯೋಜಿಸಲಾಗಿತ್ತು. ಈ ಸಭೆಯಲ್ಲಿ ತಾಲ್ಲೂಕು ಘಟಕದ ಪುನಾರಚನೆ ಹಾಗೂ ಮುಂಬರುವ ದಿನಗಳಲ್ಲಿ ಲಿಂಗಸಗೂರಿನಲ್ಲಿ ಹಮ್ಮಿಕೊಳ್ಳಲಿರುವ ಗೋರಸೇನಾ ತರಬೇತಿ ಕಾರ್ಯಾಗಾರದ ಕುರಿತು ಸುದೀರ್ಘ ಚರ್ಚೆ ನಡೆಸಿ ಪ್ರಮುಖ ನಿರ್ಣಯಗಳನ್ನು ಕೈಗೊಳ್ಳಲಾಯಿತು.

ತಾಲ್ಲೂಕು ಗೋರಸಿಕವಾಡಿಯ ತಾಲ್ಲೂಕು ಸಂಯೋಜಕರಾದ ಡಾ. ರವಿಚಂದ್ರ ಹಾಗೂ ತಾಲ್ಲೂಕು ಘಟಕದ ಹಾಲಿ ಅಧ್ಯಕ್ಷರಾದ ಶ್ರೀ ಥಾವರೆಪ್ಪ ಜಾಧವ ಅವರ ಜಂಟಿ ನೇತೃತ್ವದಲ್ಲಿ ಈ ಸಭೆಯು ಯಶಸ್ವಿಯಾಗಿ ಜರುಗಿತು.

ಸಭೆಯ ಮುಖ್ಯಾಂಶಗಳು:

ಘಟಕದ ಪುನಾರಚನೆ: ಸಂಘಟನೆಯನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ತಾಲ್ಲೂಕು ಘಟಕದ ಪದಾಧಿಕಾರಿಗಳ ಪುನಾರಚನೆ ಬಗ್ಗೆ ಚರ್ಚಿಸಲಾಯಿತು.

ತರಬೇತಿ ಕಾರ್ಯಾಗಾರ: ಲಿಂಗಸಗೂರು ತಾಲ್ಲೂಕು ಮಟ್ಟದಲ್ಲಿ ಗೋರಸೇನಾ ಕಾರ್ಯಕರ್ತರಿ

3ನೇ ಪುಟ.....

ಚಿಂಚೋಳಿ ವನ್ಯಜೀವಿ ಧಾಮದಲ್ಲಿ ಜೀಪ್ ಸಫಾರಿ ಮತ್ತು ಬೋಟಿಂಗ್ ಗೆ ಚಾಲನೆ

ಚಿಂಚೋಳಿ ಮಿನಿ ಪ್ರವಾಸಿ ಸರ್ಕ್ಯೂಟ್ ಮಾಡಲು ಕ್ರಮ -ಪ್ರಿಯಾಂಕ್ ಖರ್ಗೆ



ಕಲಬುರಗಿ,ಮಾ.15-

ಚಂದ್ರಂಪಳ್ಳಿ ಜಲಾಶಯ, ಗೊಟ್ಟಂಗೊಟ್ಟ, ಎತ್ತಿಪೊತ್ತ ಜಲಪಾತ ಸೇರಿದಂತೆ ದಟ್ಟ ಅರಣ್ಯದೊಂದಿಗೆ ವನ್ಯಜೀವಿ ತಾಣವಾಗಿರುವ ಜಿಲ್ಲೆಯ ಚಿಂಚೋಳಿಯನ್ನು ಮುಂದಿನ ಒಂದೂವರೆ ವರ್ಷದಲ್ಲಿ ಮಿನಿ ಪ್ರವಾಸಿ ಸರ್ಕ್ಯೂಟ್ ಮಾಡಲಾಗು ವುದು ಎಂದು ರಾಜ್ಯದ ಗ್ರಾಮೀ ಣಾ ಭಿವೃದ್ಧಿ ಮತ್ತು ಪಂಚಾಯತ್ ರಾಜ್, ಐ.ಟಿ-ಬಿ.ಟಿ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ಶನಿವಾರ ಚಿಂಚೋಳಿ ತಾಲೂಕಿನ ಚಂದ್ರಂಪಳ್ಳಿಯಲ್ಲಿ ಅರಣ್ಯ ಜೀಪ್ ಸಫಾರಿ ಹಾಗೂ ಚಂದ್ರಂಪಳ್ಳಿ ಜಲಾಶಯದಲ್ಲಿ ದೋಣಿ ವಿಹಾರ ಉದ್ಘಾಟಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಚಿಂಚೋಳಿ ಸುತ್ತಮುತ್ತವಿರುವ 8-10 ಪ್ರವಾಸಿ ತಾಣಗಳನ್ನು ಸರ್ಕ್ಯೂಟ್ ನಲ್ಲಿ ಸೇರಿಸಲಾಗುವುದು. ಪ್ರವಾಸಿಗರು ಒಂದು ದಿನದ ಪ್ಯಾಕೇಜ್ ನಡಿ ಇದನೆಲ್ಲ ವೀಕ್ಷಣೆಗೆ ಅವಕಾಶ ಕಲ್ಪಿಸಲಾಗುವುಸು. ಕೆ. ಎಸ್.ಟಿ.ಡಿ.ಸಿ. ಯಿಂದ ಪ್ಯಾಕೇಜ್ ಟೂರ್ ವ್ಯವಸ್ಥೆ ಸಹ ಜಾರಿಗೆ ತರಲಾಗುವುದು ಎಂದರು.

ಚಿಂಚೋಳಿ ಸುತ್ತಮುತ್ತ ಪ್ರಾಕೃತಿಕ ತಾಣಗಳ ಸೌಂದರ್ಯ ಸವೆಯಲು ಪ್ರವಾಸಿಗರಿಗೆ ಪೂರಕ ವಾಗಿ ಮೂಲಸೌಕರ್ಯ ಅಭಿವೃದ್ಧಿ ಪಡಿಸಲಾಗುತ್ತಿದೆ. ಈಗಾಗಲೆ ತೋಟಗಾರಿಕೆ ಇಲಾಖೆಯಿಂದ 6.50 ಕೋಟಿ ರೂ. ಮೊತ್ತದ ಡಿ.ಪಿ.ಆರ್. ಸಿದ್ದಪಡಿಸಲಾಗಿದೆ. ಪ್ರವಾಸೋದ್ಯಮ, ಅರಣ್ಯ, ಕೃಷಿ, ತೋಟಗಾರಿಕೆ ಹೀಗೆ ಎಲ್ಲಾ ಇಲಾಖೆಯ ಸಮನ್ವ ಯದೊಂದಿಗೆ ಬ್ಲೂಪ್ರಿಂಟ್ ಸಿದ್ದಪಡಿ ಸಲಾಗುವುದು. ಇನ್ನು ಈ ನಿಟ್ಟನಲ್ಲಿ ಶೀಘ್ರವೇ ಪ್ರವಾಸೋದ್ಯಮ ಸಚಿ ವರನ್ನು ಸಹ ಭೇಟಿ ಮಾಡಿ ಚರ್ಚಿ ಸಲಾಗುವುದು ಎಂದರು.

ಅರಣ್ಯ ಜೀಪ್ ಸಫಾರಿಗೆ 24 ಲಕ್ಷ ವೆಚ್ಚದಲ್ಲಿ ಎರಡು ಕ್ಯಾಂಪರ್ ವಾಹನಗಳನ್ನು ಖರೀದಿಸಿ ಸಫಾರಿ ವಾಹನಗಳಾಗಿ ಮಾರ್ಪಡಿಸಲಾಗಿದೆ. 64 ಲಕ್ಷ ರೂ. ವೆಚ್ಚದಲ್ಲಿ ಸಫಾರಿ ರಸ್ತೆ ಅಭಿವೃದ್ಧಿಪಡಿಸಲಾಗಿದೆ. 43 ಲಕ್ಷ ರೂ. ವೆಚ್ಚದಲ್ಲಿ ಮೂಲಭೂತ ಸೌಲ ಭ್ಯಗಳೊಂದಿಗೆ ಗೊಟ್ಟಂಗೊಟ್ಟದಲ್ಲಿ ಎರಡು ಹೆಚ್ಚುವರಿ ಟೆಂಟ್ ಹೌಸ್ ನಿರ್ಮಿಸಲಾಗಿದೆ. 14 ಲಕ್ಷ ರೂ. ವೆಚ್ಚದಲ್ಲಿ ಮನರಂಜನಾ ಚಟುವಟಿ ಕೆಗಳಿಗಾಗಿ 12 ಆಸನಗಳ ಮೋಟಾರ್ ದೋಣಿ ಮತ್ತು ಎರಡು ಪೆಡಲ್ ದೋಣಿಗಳು ಮತ್ತು ಕಯಾಕ್ ಗಳನ್ನು ಒದಗಿಸಲಾಗಿದೆ. ಇದಲ್ಲದೆ ಕೆಕೆಆರ್ ಡಿಬಿಯ ಮ್ಯಾಕ್ರೋ ಅನುದಾನದಲ್ಲಿ 2 ಕೋಟಿ ರೂ. ವೆಚ್ಚದಲ್ಲಿ ಕೈ ಗೊಂಡಿರುವ ವಿವಿಧ ಪ್ರವಾಸೋ ದ್ಯಮ ಅಭಿವೃದ್ಧಿ ಕಾರ್ಯಕ್ರಮಗಳು ಹೆಚ್ಚು ಪ್ರವಾಸಿಗರನ್ನು ಆಕರ್ಷಿ ಸುವುದರಲ್ಲಿ ಅನುಮಾನವಿಲ್ಲ. ಇಲ್ಲಿನ ಪ್ರವಾಸೋದ್ಯಮ ಹೆಚ್ಚಿದಂತೆ ಸ್ಥಳೀಯ ಆರ್ಥಿಕತೆಗೆ ಉತ್ತೇಜನ ದೊರಕುತ್ತದೆ ಮತ್ತು ಸ್ಥಳೀಯರ ಉದ್ಯೋಗಾವಕಾಶಗಳು ಹೆಚ್ಚುತ್ತದೆ ಎಂಬ ನಂಬಿಕೆ ನಮ್ಮದು ಎಂದು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದರು.

ಪ್ರವಾಸೋದ್ಯಮದ ಈ ಬೆಳವಣಿಗೆಯಿಂದ ಸ್ಥಳೀಯ ಹೋಟೆಲ್ ಉದ್ಯಮ, ಸಣ್ಣ ವ್ಯಾಪಾರಿಗಳು ಹೆಚ್ಚಿನ ಉದ್ಯೋಗಾವಕಾಶಗಳು ದೊರೆಯಲಿವೆ. ಮುಂದಿನ ಎರಡು ವರ್ಷದಲ್ಲಿ ಕಲಬುರಗಿ ಜಿಲ್ಲೆಯ ಪ್ರವಾಸೋದ್ಯಮದ ಚಿತ್ರಣವೇ ಬದಲಾಗಲಿದ್ದು, ಜಿಲ್ಲೆಯ ಆಹಾರ, ಕಲೆ ಸಂಸ್ಕೃತಿ, ಪ್ರವಾಸಿ ತಾಣಗಳನ್ನು ಪರಿಚಯಿಸುವ ಮೂಲಕ ಇದನ್ನು ಉಳಿಸಿ ಬೆಳೆಸಲು ನಮ್ಮ ಸರ್ಕಾರದ ಬದ್ಧವಾಗಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದರು.

ಪ್ರಸಕ್ತ ವರ್ಷ ಸನ್ನತಿ, ನಾಗಾವಿ, ಮಳಖೇಡ್ ಕೋಟೆ, ಕಾಳಗಿ ಪ್ರವಾಸಿ ತಾಣಗಳಲ್ಲಿ ಮೂಲಸೌಕರ್ಯ ಅಭಿವೃದ್ಧಿ ಪಡಿಸಲಾಗುತ್ತಿದೆ. ಕಲಬುರಗಿ ಕೋಟೆಯಲ್ಲಿನ ನಿವಾಸಿಗಳನ್ನು ಸುಪ್ರೀಂ ಕೋರ್ಟ್ ನಿರ್ದೇಶನದಂತೆ ಬೇರೆಡೆ ಸ್ಥಳಾಂತರಿಸಲಾಗುತ್ತಿದ್ದು, ನಿವಾಸಿಗಳ ಮನವೊಲಿಸುವ ಕೆಲಸ ನಡೆದಿದೆ. ಮುಂದಿನ ಒಂದು ತಿಂಗಳಲ್ಲಿ ಅದು ಸಹ ಪೂರ್ಣ ವಾಗಲಿದೆ. ಇದರಿಂದ ಪಾರಂಪರಿಕ ಕೋಟೆ ಮತ್ತೆ ತನ್ನ ಮೆರಗಿನಿಂದ ಪ್ರವಾಸಿಗರನ್ನು ಅಕರ್ಷಿಸಲಿದೆ ಎಂದರು.

ಜಂಗಲ್ ಲಾಡ್ಜೆಸ್-ರೆಸಾರ್ಟ್ ಆರಂಭ: ಇಲ್ಲಿನ ಪ್ರಕೃತಿ ಸೊಬಗನ್ನು ಆನಂದಿಸಲು ಪ್ರವಾಸಿಗರ ತಂಗಲು ಅನುಕೂಲವಾಗುವಂತೆ ಚಂದ್ರಂಪಳ್ಳಿಯಲ್ಲಿ ಜಂಗಲ್ ಲಾಡ್ಜೆಸ್ ಮತ್ತು ರೆಸಾರ್ಟ್ ಆರಂಭಿಸುವ ಚಿಂತನೆ ಇದೆ. ಎಲ್ಲದಕ್ಕು ಪರಿಸರ ಕ್ಲಿಯರೆನ್ಸ್ ರ ಅಗತ್ಯವಿದ್ದು, ಅದು ಸಿಕ್ಕಿದ ಮೇಲೆ ನೀಲಿ ನಕ್ಷೆ ಸಿದ್ದಪಡಿಸಿ ಇದನ್ನೆಲ್ಲ ಅನುಷ್ಠಾನಕ್ಕೆ ತರಲಾಗುವುಎಮದು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿ ದರು.

ಬೋಟಿಂಗ್ ಗೆ 175 ರೂ., ಸಫಾರಿಗೆ 450 ರೂ.:ಉಪ ಅರಣ್ಯ ಸಂರಕ್ಷಣಾಧಿಕಾರಿ ಸುಮಿತ್ ಪಾಟೀಲ ಮಾತನಾಡಿ, ಚಂದ್ರಂಪಳ್ಳಿ ಜಲಾಶಯದಲ್ಲಿ ಬೋಟಿಂಗ್ ನಡೆಸಲು ಬೇಕಾದ ಎಲ್ಲಾ ಸಿದ್ದತೆಗಳನ್ನು ಮಾಡಿಕೊಳ್ಳಲಾಗಿದ್ದು, ಪ್ರವಾಸಿಗರ ಸುರಕ್ಷತೆಗೆ ಹೆಚ್ಚಿನ ಒತ್ತು ನೀಡಲಾಗಿದೆ. ಬೋಟ್ ಆಪರೇಟರ್‌ಗಳಿಗೆ ಗೋವಾದ 'ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ವಾಟರ್ ಸ್ಪೋರ್ಟ್ಸ್' ಸಂಸ್ಥೆಯಿಂದ ವಿಶೇಷ ತರಬೇತಿ ಕೊಡಿಸಲಾಗಿದೆ. ಸ್ಥಳೀಯ 15 ಯುವಕರಿಗೆ ಈಜುವುದು ಸೇರಿದಂತೆ ತುರ್ತು ಸಂದರ್ಭಗಳಲ್ಲಿ ಹೇಗೆ ಕಾರ್ಯನಿರ್ವಹಿಸಬೇಕು ಎಂಬ ಬಗ್ಗೆ ತರಬೇತಿ ನೀಡಲಾಗಿದೆ. ಬೋಟ್ ನಡೆಸಲು ಅಗತ್ಯವಿರುವ ಲೈಸೆನ್ಸ್ ಮತ್ತು ಇನ್ಶೂರೆನ್ಸ್ ಪ್ರಕ್ರಿಯೆಗಳು ಪೂರ್ಣಗೊಂಡಿವೆ. ಲೈಫ್ ಜಾಕೆಟ್‌ಗಳು ಮತ್ತು ಅಗ್ನಿ ಶಾಮಕ ಉಪಕರಣಗಳನ್ನು ಪ್ರತಿ ಬೋಟ್‌ನಲ್ಲಿ ಕಡ್ಡಾಯಗೊಳಿಸಲಾಗಿದೆ ಎಂದರು.

ಬೋಟ್ ರೈಡಿಂಗ್ ಗೆ ಪ್ರತಿ ವ್ಯಕ್ತಿಗೆ 175 ರೂ. ದರ ನಿಗದಿಪಡಿಸಿದೆ. ಇನ್ನು ಅರಣ್ಯ ಸುತ್ತುವ ಜೀಪ್ ಸಫಾರಿಗೆ ವಯಸ್ಕರಿಗೆ 450 ರೂ., ಮಕ್ಕಳಿಗೆ 200 ರೂ. ದರ ಇರಲಿದೆ. ಇದಲ್ಲದೆ, ದೂರದ ಊರುಗಳಿಂದ ಬರುವ ಪ್ರವಾಸಿಗರಿಗಾಗಿ ಜಲಾಶಯದ ಸಮೀಪವಿರುವ ಕಾಟೇಜ್ ಜೊತೆಗೆ ಹೆಚ್ಚುವರಿಯಾಗಿ ತಂಗಲು ಟೆಂಟ್ ಹೌಸ್ ವ್ಯವಸ್ಥೆಯನ್ನು ವೈಜ್ಞಾನಿಕವಾಗಿ ಮಾಡಲಾಗುತ್ತಿದೆ ಎಂದರು.

ವಿಧಾನ ಪರಿಷತ್ ಶಾಸಕ ಜಗದೇವ ಗುತ್ತೇದಾರ, ಕೆ.ಕೆ.ಆರ್. ಟಿ.ಸಿ ಅಧ್ಯಕ್ಷ ಅರುಣಕುಮಾರ ಪಾಟೀಲ, ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್, ಕಲಬುರಗಿ ವಲಯದ ಅರಣ್ಯ ಸಂರಕ್ಷಣಾಧಿಕಾರಿ ಸುನಿಲ ಪನ್ವಾರ, ಜಿ. ಪಂ. ಸಿ.ಇ.ಓ ಭಂವರ್ ಸಿಂಗ್ ಮೀನಾ, ಎಸ್.ಪಿ. ಅಡ್ಡೂರು ಶ್ರೀನಿವಾಸಲು, ಸಮದ್ ಪಟೇಲ್, ಜಂಟಿ ತೋಟಗಾರಿಕೆ ನಿರ್ದೇಶಕ ಸಂತೋಷ ಇನಾಂದಾರ, ವಲಯ ಅರಣ್ಯಾಧಿಕಾರಿ ಸುಭಾಷ ರಾಠೋ ಡ, ಕೈಲಾಶನಾಥ ಪಾಟೀ ಲ, ದೀಪ ಕನಾಗ್ ಪುಣ್ಯಶೆಟ್ಟಿ ಸೇರಿ ಅರಣ್ಯ ಇಲಾಖೆಯ ಇತರೆ ಅಧಿಕಾರಿಗಳು ಇದ್ದರು.



ಬಿಜೆಪಿಯಿಂದ ವಿಶ್ವ ಮಹಿಳಾ ದಿನಾಚರಣೆ. ಮಹಿಳೆಯರ ಮಾತೃತ್ವ ಶಕ್ತಿ ದೊಡ್ಡದಾಗಿದ್ದು, ಜಗತ್ತಿನಲ್ಲಿ ಮಹಿಳೆಗೆ ಮಾತೃ ಸ್ಥಾನ ನೀಡಿದ್ದು ಭಾರತ : ಸೋನಿಯಾ ಪರಾಂಡೆ

ಬಾಗಲಕೋಟೆ,ಮಾ.15-

ಮಹಿಳೆಯರ ಮಾತೃತ್ವ ಶಕ್ತಿ ದೊಡ್ಡದಾಗಿದ್ದು, ಜಗತ್ತಿನಲ್ಲಿ ಮಹಿಳೆಗೆ ಪೂಜ್ಯನೀಯ ಮಾತೃಸ್ಥಾನ ನೀಡಿ ಗೌರವಿಸಿದ್ದು ಭಾರತ ಎಂದು ವಕೀಲರಾದ ಸೋನಿಯಾ ಪರಾಂಡೆ ಹೇಳಿದರು

ಅವರು ಭಾರತೀಯ ಜನತಾ ಪಾರ್ಟಿ ಬಾಗಲಕೋಟೆ ಮತಕ್ಷೇತ್ರದ ಮಹಿಳಾ ಮೋರ್ಚಾದಿಂದ ಬಿವಿವಿಸಂಘದ ಮಿನಿ ಸಭಾಭವನದಲ್ಲಿ ಶನಿವಾರ ಹಮ್ಮಿಕೊಂಡ ವಿಶ್ವ ಮಹಿಳಾ ದಿನಾಚರಣ ಹಾಗೂ ಸಾಧಕಿಯರಿಗೆ ಸನ್ಮಾನ ಕಾರ್ಯಕ್ರಮವನ್ನು ಭಾರತಮಾತೆಯ ಭಾವಚಿತ್ರಕ್ಕೆ ಪುಷ್ಪಾಂಜಲಿ ಸಲ್ಲಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿ ಮಾಜಿ ಶಾಸಕ ಡಾ. ವೀರಣ್ಣ ಚರಂತಿಮಠ ಅವರು ಮಾತನಾಡಿ ದೇಶದಲ್ಲಿ ಪ್ರಧಾನಿ ನರೇಂದ್ರ ಮೋದಿಯವರು ಬಂದ ಮೇಲೆ ಮಹಿಳೆಯರ ಸಭಲೀಕರಣಕ್ಕೆ ಒತ್ತು ನೀಡಿ, ಅವರಿಗೆ ಪ್ರೋತ್ಸಾಹ ಗೌರವ ಹೆಚ್ಚಿಸುವಲ್ಲಿ ಅನೇಕ ಯೋಜನೆಗಳ ತಂದಿದ್ದಾರೆ, ವಿಶ್ವದಲ್ಲಿ ಭಾರತೀಯ ಮಹಿಳೆಯರ ಮಾತೃತ್ವ ಶಕ್ತಿ ದೊಡ್ಡದು, ನಾರಿ ಶಕ್ತಿಯನ್ನು ಬಲಪಡಿಸುವ ಉದ್ದೇಶದಿಂದ ಪ್ರಧಾನಿ ನರೇಂದ್ರ ಮೋದಿಯವರು ಅನೇಕ ಯೋಜನೆಗಳನ್ನು ಜಾರಿಗೆ ತರುವ ಮೂಲಕ ಶಕ್ತಿ ನೀಡಿದ್ದಾರೆ, ಇಂದು ಎಲ್ಲಡೆ ಮಹಿಳೆಯರ ಗೌರವ ಹೆಚ್ಚಾಗಿದೆ ಎಂದರು.

ಅದ್ಯಕ್ಷತೆಯನ್ನು ವಹಿಸಿದ ನಗರ ಮಂಡಲದ ಮಹಿಳಾ ಮೋರ್ಚಾ ಅದ್ಯಕ್ಷರಾದ ಶಶಿಕಲಾ ಮಜ್ಜಗಿ ಅವರು ಮಾತನಾಡಿ ಇಂದು ಮಹಿಳೆಯರ ಸರ್ವಾಂಗಿಣ ಬೆಳವಣಿಗೆಯೊಂದಿಗೆ ಅವರ ಭದ್ರತೆಗೆ ಬಿಜೆಪಿ ಪ್ರಧಾನಿ ನರೇಂದ್ರ ಮೋದಿಯವರು ಆದ್ಯತೆ ನೀಡಿರುವುದು ಸ್ವಾಗತಾರ್ಹವಾಗಿದೆ, ಮಹಿಳೆಯರು ಹೆಚ್ಚು ಸಂಘಟಿತರಾಗಿ ಮನೆಯ ಆರ್ಥಿಕ ನೈತಿಕ ಗುಣಮಟ್ಟವನ್ನು ಕಾಪಾಡುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದರು.

ಬಿಜೆಪಿ ಜಿಲ್ಲಾ ಉಪಾಧ್ಯಕ್ಷೆ ಭಾಗೀರತಿ ಪಾಟೀಲ ಹಾಗೂ ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷೆ ಸುಮೇಧಾ ಮಾನೆ, ರಾಜ್ಯ ಕಾರ್ಯದರ್ಶಿ ಭಾಗ್ಯಾ ಉದ್ನೂರ, ಜಿಲ್ಲಾ ಕಾರ್ಯದರ್ಶಿ ಪಾರ್ವತಿ ಹುಗ್ಗಿ, ಮಹಿಳಾ ಗ್ರಾಮೀಣ ಮಂಡಲ ಅಧ್ಯಕ್ಷೆ ಸವಿತಾ ಪಾತ್ರೋಟ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸುಜಾತ ಶಿಂಧೆ ವೇದಿಕೆ ಮೇಲೆ ಉಪಸ್ಥಿತರಿದ್ದರು.

ಸನ್ಮಾನ : ರಾಷ್ಟ್ರಪ್ರಶಸ್ತಿ ವಿಜೇತೆ ಗುರುಮ್ಮ ಸಂಕೀನಮಠ ಹಾಗೂ ಕ್ರೀಡೆಯಲ್ಲಿ ಸಾಧನೆ ಮಾಡಿದ ಮಹಿಳಾ ಕ್ರೀಡಾ ಪಟುಗಳಿಗೆ ಸನ್ಮಾನಿಸಲಾಯಿತು, ನಾಗರತನ್ನಾ ಒಕ್ಕಲಕುಂಟಿ ಕಾರ್ಯಕ್ರಮ ನಿರೂಪಿಸಿದರು, ಲಕ್ಷ್ಮೀಮಡಿವಾಳರ ಸ್ವಾಗತಿಸಿದರು, ಸುನಂದಾ ಹಿರೇಮಠ ವಂದಿಸಿದರು. ಶೋಭಾ ರಾವ, ರೇಖಾ ಕಲಬುರಗಿ, ಸರಸ್ವತಿ ಕುರುಬರ, ಶಿವಲೀಲಾ ಪಟ್ಟಣಶೆಟ್ಟಿ, ಪ್ರೇಮಾ ಅಂಬಿಗೇರ ಸೇರಿದಂತೆ ಅನೇಕರು ಭಾಗವಹಿಸಿದ್ದರು.



ನವೀಕೃತ ಸಾಲು ಮರದ ತಿಮ್ಮಕ್ಕ ವೃಕ್ಷೋದ್ಯಾನ ಉದ್ಘಾಟಿಸಿದ ಸಚಿವ ಪ್ರಿಯಾಂಕ್ ಖರ್ಗೆ

ಕಲಬುರಗಿ,ಮಾ.14-

ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಶನಿವಾರ ಸ್ಥಳೀಯ ಶಾಸಕ ಡಾ.ಅವಿನಾಶ ಜಾಧವ ಅವರೊಂದಿಗೆ ಚಿಂಚೋಳಿ ಬಳಿಯ ಪೋಲಕಪಲ್ಲಿಯಲ್ಲಿ ನವೀಕೃತ ಸಾಲು ಮರದ ತಿಮ್ಮಕ್ಕ ವೃಕ್ಷವನ ಉದ್ಘಾಟಿಸಿದರು.

ನಂತರ ಅಧಿಕಾರಿಗಳೊಂದಿಗೆ ವನದಲ್ಲಿ ಒಂದು ಸುತ್ತು ಹಾಕಿ ವಿವಿಧ ಸಸ್ಯ ರಾಶಿಗಳನ್ನು ವೀಕ್ಷಿಸಿದರು. ಲೋಟಸ್ ಎಕೋ ಪಾಂಡ್ ಬಳಿ ಪೋಟೋ ಗೆ ಪೋಸ್ ನೀಡಿದರು.

ಇದೇ ಸಂದರ್ಭದಲ್ಲಿ ಅರಣ್ಯ ಇಲಾಖೆಯಿಂದ 2021-22ನೇ ಸಾಲಿನ ಲ್ಯಾಂಡ್ ಬಿಲ್ಡಿಂಗ್ ಯೋಜನೆ ಅಡಿಯಲ್ಲಿ 37.50 ಲಕ್ಷ ರೂ. ವೆಚ್ಚದಲ್ಲಿ ನಿರ್ಮಿಸಲಾಗಿರುವ ಚಿಂಚೋಳಿ ಅರಣ್ಯ ವಲಯದ ಹೊಸ ವಲಯ ಅರಣ್ಯಾಧಿಕಾರಿಗಳ ಕಛೇರಿ ಕಟ್ಟಡ ಮತ್ತು 2024-25ನೇ ಸಾಲಿನ ಲಿಂಕ್ ಡಾಕುಮೆಂಟ್ ಯೋಜನೆ ಅಡಿಯಲ್ಲಿ ಚಿಂಚೋಳಿ ಸಾಮಾಜಿಕ ಅರಣ್ಯ ವಲಯದ ಹೊಸ ವಲಯ ಅರಣ್ಯ ಅಧಿಕಾರಿಗಳ ಕಛೇರಿ ಕಟ್ಟಡ ಹಾಗೂ ಉಪ ವಲಯ ಅರಣ್ಯ ಅಧಿಕಾರಿಗಳ ವಸತಿ ಗೃಹ ಕಟ್ಟಡವನ್ನು ಸಹ ಉದ್ಘಾಟಿಸಲಾಯಿತು.

ಜಾಗೃತಿ ಅಭಿಯಾನಕ್ಕೆ ಚಾಲನೆ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕೃಷಿ ಇಲಾಖೆ ಹಾಗೂ ಕೃಷಿ ವಿಜ್ಞಾನ ಕೇಂದ್ರ, ಕಲಬುರಗಿ ಸಹಯೋಗದೊಂದಿಗೆ ಕಸ್ಕುಟ (ಅಂತರವಳ್ಳಿ / ಮಂಗನ ಬಾಲ) ಕಳೆಯ ನಿರ್ವಹಣೆ ಹಾಗೂ ತೊಗರಿಯಲ್ಲಿ ಬರುವ ಗೊಡ್ಡು / ನೆಟೆ ರೋಗ ನಿರ್ವಹಣೆ ಕುರಿತು ರೈತಾಪಿ ಜನರಲ್ಲಿ ಅರಿವು ಮೂಡಿಸಲು ಕೃಷಿ ಇಲಾಖೆಯ ಜಾಗೃತಿ ಅಭಿಯಾನಕ್ಕೆ ಸಚಿವ ಪ್ರಿಯಾಂಕ್ ಖರ್ಗೆ ಚಾಲನೆ ನೀಡಿದರು. ಇದಲ್ಲದೆ ಪೋಸ್ಟರ್ ಸಹ ಬಿಡುಗಡೆ ಮಾಡಲಾಯಿತು.

ಕೃಷಿ ಉಪನಿರ್ದೇಶಕಿ ಅನುಸೂಯಾ ಹೂಗಾರ ಇದ್ದರು.

ವಿಧಾನ ಪರಿಷತ್ ಶಾಸಕ ಜಗದೇವ ಗುತ್ತೇದಾರ, ಕೆ.ಕೆ.ಆರ್.ಟಿ.ಸಿ ಅಧ್ಯಕ್ಷ ಅರುಣಕುಮಾರ ಪಾಟೀಲ, ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್, ಕಲಬುರಗಿ ವಲಯದ ಅರಣ್ಯ ಸಂರಕ್ಷಣಾಧಿಕಾರಿ ಸುನಿಲ ಪನ್ವಾರ, ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ, ಎಸ್.ಪಿ. ಅಡ್ಡೂರು ಶ್ರೀನಿವಾಸಲು, ಡಿ.ಸಿ.ಎಫ್ ಸುಮಿತ ಪಾಟೀಲ, ವಲಯ ಅರಣ್ಯಾಧಿಕಾರಿ ಸಂಜೀವಕುಮಾರ ಚವ್ಹಾಣ, ಮಾಜಿ ಶಾಸಕ ಕೈಲಾಸನಾಥ ಪಾಟೀಲ, ಜಿಲ್ಲಾ ಪಂಚಾಯತ್ ಮಾಜಿ ಸದಸ್ಯರಾದ ಸುಭಾಷ ರಾಠೋಡ, ದೀಪಕನಾಗ್ ಪುಣ್ಯಶೆಟ್ಟಿ ಸೇರಿದಂತೆ ಅರಣ್ಯ ಇಲಾಖೆಯ ಇತರೆ ಅಧಿಕಾರಿಗಳು ಇದ್ದರು.

ಜೆಸ್ಕಾಂ ಕಾರ್ಯ ಮತ್ತು ಪಾಲನಾ ವೃತ್ತ ಕಚೇರಿ ಸಂಕೀರ್ಣ ಕಟ್ಟಡದ ಶಂಕುಸ್ಥಾಪನೆ ಸಮಾರಂಭ

ಜೆಸ್ಕಾಂ ಹೊಸ ಕಚೇರಿ ಸಂಕೀರ್ಣದಿಂದ ಜನರಿಗೆ ಉತ್ತಮ ಸೇವೆ ದೊರೆಯಲಿದೆ: ಶಾಸಕ ಕೆ. ರಾಘವೇಂದ್ರ ಹಿಟ್ನಾಳ್



ಕೊಪ್ಪಳ ಮಾ.15-

ಜೆಸ್ಕಾಂ ಇಲಾಖೆಯ ಸೇವೆಗಳು ಜನರ ದೈನಂದಿನ ಜೀವನದಲ್ಲಿ ಅತ್ಯಂತ ಪ್ರಮುಖವಾಗಿದ್ದು, ಹೊಸ ಕಚೇರಿ ಸಂಕೀರ್ಣ ನಿರ್ಮಾಣದಿಂದ ಸಾರ್ವಜನಿಕರಿಗೆ ವೇಗವಾದ ಮತ್ತು ಪರಿಣಾಮಕಾರಿ ವಿದ್ಯುತ್ ಸೇವೆ ದೊರೆಯಲಿದೆ ಎಂದು ಕೊಪ್ಪಳ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ ಹೇಳಿದರು.

ಶನಿವಾರದಂದು ನಗರದ 110/33/11 ಕೆ.ವಿ ವಿದ್ಯುತ್ ಉಪಕೇಂದ್ರದ ಆವರಣದಲ್ಲಿ ಕೊಪ್ಪಳ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಕೊಪ್ಪಳ ನಗರದಲ್ಲಿ ಅಂದಾಜು ರೂ.1950 ಲಕ್ಷ ವೆಚ್ಚದಲ್ಲಿ ನಿರ್ಮಾಣಗೊಳ್ಳಲಿರುವ ಜೆಸ್ಕಾಂ ಕಾರ್ಯ ಮತ್ತು ಪಾಲನಾ ವೃತ್ತ ಕಚೇರಿ ಸಂಕೀರ್ಣ ಕಟ್ಟಡದ ಶಂಕುಸ್ಥಾಪನೆ ಸಮಾರಂಭದಲ್ಲಿ ಶಂಕುಸ್ಥಾಪನೆ ನೆರವೇರಿಸಿ ಅವರು ಮಾತನಾಡಿದರು.

ಬಹಳ ವರ್ಷಗಳಿಂದ ಕೊಪ್ಪಳದಲ್ಲಿ ಜೆಸ್ಕಾಂ ಸರ್ಕಲ್ ಕಚೇರಿ ಸ್ಥಾಪನೆಯಾಗಬೇಕು ಎಂಬುದು ಇಲಾಖೆಯ ಸಿಬ್ಬಂದಿ ಹಾಗೂ ಜಿಲ್ಲೆಯ ಜನರ ಬಹುದಿನಗಳ ಆಶಯವಾಗಿತ್ತು. ಇದೀಗ ಸುಮಾರು ರೂ.19 ಕೋಟಿ ವೆಚ್ಚದಲ್ಲಿ ನೂತನ ಕಟ್ಟಡ ನಿರ್ಮಾಣವಾಗುತ್ತಿರುವುದು ಸಂತಸದ ವಿಷಯವಾಗಿದೆ. ನೂತನ ವೃತ್ತ ಕಚೇರಿ ಸಂಕೀರ್ಣದಿಂದ ಜಿಲ್ಲೆಯ ಜನರಿಗೆ ಬಹಳಷ್ಟು ಅನುಕೂಲವಾಗಲಿದೆ. ಈ ಮೊದಲು ಜೆಸ್ಕಾಂ ಕಾರ್ಯ ಚಟುವಟಿಕೆಗಳು ಮುನಿರಾಬಾದ್ ಹಾಗೂ ರಾಯಚೂರಿನಲ್ಲಿ ಪ್ರಮುಖವಾಗಿ ನಡೆಯುತ್ತಿದ್ದವು. ಈಗ ಕೊಪ್ಪಳದಲ್ಲೇ ವೃತ್ತ ಕಚೇರಿ ಸ್ಥಾಪನೆಯಾಗುತ್ತಿರುವುದು ಜಿಲ್ಲೆಯ ಅಭಿವೃದ್ಧಿಗೆ ಮಹತ್ವದ ಹೆಜ್ಜೆಯಾಗಲಿದೆ ಎಂದು ಹೇಳಿದರು.

ತುಂಗಭದ್ರಾ ನದಿಯ ಎಡದಂಡೆಯಲ್ಲಿ ನಮ್ಮ ಜಿಲ್ಲೆ ಇದೆ. ಜಿಲ್ಲೆಯಲ್ಲಿ ನೀರಾವರಿ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಲಾಗುತ್ತಿದ್ದು, ಸಿಂಗಟಾಲೂರು ಏತ ನೀರಾವರಿ ಹಾಗೂ ವಿವಿಧ ನೀರಾವರಿ ಯೋಜನೆಗಳ ಮೂಲಕ ಈ ವರ್ಷದಲ್ಲಿ ಸುಮಾರು ರೂ.1052 ಕೋಟಿ ವೆಚ್ಚದಲ್ಲಿ 78 ಸಾವಿರ ಎಕರೆ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಒದಗಿಸುವ ಕಾರ್ಯ ನಡೆಯುತ್ತಿದೆ. ಒಟ್ಟು ಸುಮಾರು 1 ಲಕ್ಷ ಎಕರೆ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸುವ ಗುರಿ ಹೊಂದಲಾಗಿದೆ ಎಂದು ತಿಳಿಸಿದರು.


ನೀರಾವರಿ ವಿಸ್ತರಣೆಗೆ ಪೂರಕವಾಗಿ ರೈತರಿಗೆ ವಿದ್ಯುತ್ ಪೂರೈಕೆ ಅಗತ್ಯವಾಗಿದ್ದು, ಈಗಾಗಲೇ ಮೂರು ಹೊಸ ಸಬ್‌ಸ್ಟೇಷನ್‌ಗಳ ನಿರ್ಮಾಣಕ್ಕೆ ಟೆಂಡರ್ ಕರೆಯಲಾಗಿದೆ. ಗೊಂಡಬಾಳ, ನೆಲೋಗಿಪುರ ಹಾಗೂ ಚಿಲವಾಡಗಿ ಸೇರಿದಂತೆ ಇನ್ನೂ ಮೂರು ಸಬ್‌ಸ್ಟೇಷನ್‌ಗಳನ್ನು ನಗರ ಪ್ರದೇಶದಲ್ಲಿ ನಿರ್ಮಿಸಲು ಸಚಿವ ಕೆ.ಜೆ. ಜಾರ್ಜ್ ಅವರಿಗೆ ಮನವಿ ಮಾಡಲಾಗಿದೆ. ಕೊಪ್ಪಳ ನಗರದಲ್ಲಿ ಕುಡಿಯುವ ನೀರಿನ ವ್ಯವಸ್ಥೆಯನ್ನು 24★7 ರೀತಿಯಲ್ಲಿ ಒದಗಿಸಲು ಪ್ರತ್ಯೇಕ ಫೀಡರ್ ವ್ಯವಸ್ಥೆ ಕಲ್ಪಿಸುವ ಕುರಿತು ಚರ್ಚೆ ನಡೆಸಲಾಗಿದೆ. ಮನೆ ಮನೆಗಳಿಗೆ ನೀರಿನ ಸಂಪರ್ಕ ಒದಗಿಸಲು ಸುಮಾರು ರೂ.125 ಕೋಟಿ ಅನುದಾನ ಮಂಜೂರಾಗಿದೆ. ತಾಲೂಕು ಮಿನಿ ಸೌಧ ನಿರ್ಮಾಣಕ್ಕೂ ಸುಮಾರು ರೂ.18 ಕೋಟಿ ವೆಚ್ಚದ ಅನುಮೋದನೆ ದೊರೆತಿದ್ದು, ನಗರದ ಅಭಿವೃದ್ಧಿಗೆ ಎಲ್ಲರೂ ಕೈಜೋಡಿಸಬೇಕು ಎಂದು ಅವರು ಕರೆ ನೀಡಿದರು.

ಈ ಹೊಸ ಜೆಸ್ಕಾಂ ಕಚೇರಿ ಸಂಕೀರ್ಣವು ಕೊಪ್ಪಳ ನಗರ ಹಾಗೂ ಸುತ್ತಮುತ್ತಲಿನ ಪ್ರದೇಶಗಳ ವಿದ್ಯುತ್ ವಿತರಣಾ ವ್ಯವಸ್ಥೆಯನ್ನು ಮತ್ತಷ್ಟು ಸುಧಾರಿಸಲು ಸಹಕಾರಿಯಾಗಲಿದ್ದು, ಸಾರ್ವಜನಿಕರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸಲು ಅನುಕೂಲವಾಗಲಿದೆ ಎಂದು ಶಾಸಕ ರಾಘವೇಂದ್ರ ಹಿಟ್ನಾಳ್ ಹೇಳಿದರು.

ಕೊಪ್ಪಳ ಸಂಸದರಾದ ಕೆ.ರಾಜಶೇಖರ ಹಿಟ್ನಾಳ ಅವರು ಮಾತನಾಡಿ, ನಿರಂತರ ಜ್ಯೋತಿ ಬಂದ ಮೇಲೆ ವಿದ್ಯಾರ್ಥಿಗಳಿಗೆ, ರೈತರಿಗೆ ಹಾಗೂ ಸಾರ್ವಜನಿಕರಿಗೆ ತೊಂದರೆ ಆಗದಹಾಗೆ ಜೆಸ್ಕಾಂ ಸಿಬ್ಬಂದಿಗಳು ಮತ್ತು ಪವರ್‌ಮೆನ್‌ಗಳು ಬಹಳ ನಿಷ್ಠೆಯಿಂದ ವಿದ್ಯುತ್ ಪೂರೈಕೆ ಮಾಡಿದ್ದೀರಿ. ಹೊಸ ಕಟ್ಟಡ ನಿರ್ಮಾಣದಿಂದ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಅಗತ್ಯವಾದ ಸೌಲಭ್ಯಗಳು ದೊರೆಯಲಿದ್ದು, ಸಾರ್ವಜನಿಕರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸಲು ಸಹಕಾರಿಯಾಗಲಿದೆ ಎಂದರು.

ಕಾರ್ಯಕ್ರಮದಲ್ಲಿ ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪ್ರಸನ್ನ ಗಡಾದ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಉಪಾಧ್ಯಕ್ಷ ಮಂಜುನಾಥ ಗೊಂಡಬಾಳ, ಜೆಸ್ಕಾಂ ಬಳ್ಳಾರಿಯ ಕಾರ್ಯ ಮತ್ತು ಪಾಲನಾ ವಲಯದ ಮುಖ್ಯ ಇಂಜಿನಿಯರ್ ಮೌನೇಶ್ ಎಸ್.ಪತ್ತಾರ್, ಜೆಸ್ಕಾಂ ಕೊಪ್ಪಳ ಕಾರ್ಯ ಮತ್ತು ಪಾಲನಾ ವೃತ್ತದ ಅಧೀಕ್ಷಕ ಇಂಜಿನಿಯರ್ ರಮೇಶ್ ಎಚ್., ಜೆಸ್ಕಾಂ ಬಳ್ಳಾರಿಯ ಕಾರ್ಯ ಮತ್ತು ಪಾಲನಾ ವಲಯದ ಕಾರ್ಯನಿರ್ವಾಹಕ ಇಂಜಿನಿಯರ್ ಖಾಜಾ ಮೈನುದ್ದೀನ್, ಜೆಸ್ಕಾಂ ಕೊಪ್ಪಳದ ಕಾರ್ಯ ಮತ್ತು ಪಾಲನಾ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ ಮೋಟ್ಲನಾಯ್ಕ ಎಂ., ನೌಕರರ ಸಂಘದ ಉಪಾಧ್ಯಕ್ಷ ಜೆಸ್ಕಾಂ ಅಧಿಕಾರಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು, ಜನಪ್ರತಿನಿಧಿಗಳು ಹಾಗೂ ಸ್ಥಳೀಯ ನಾಗರಿಕರು ಉಪಸ್ಥಿತರಿದ್ದರು.

ಜಿಲ್ಲಾ ಸಂಕಿರ್ಣ ಕಟ್ಟಡ ಕಾಮಗಾರಿ ವೀಕ್ಷಿಸಿದ ಸಚಿವ ಈಶ್ವರ ಬಿ.ಖಂಡ್ರೆ




ಬೀದರ, ಮಾ.15-

ಬೀದರ ನಗರದ ಹಳೆ ಜಿಲ್ಲಾಧಿಕಾರಿಗಳ ಕಚೇರಿ ಸ್ಥಳದಲ್ಲಿ ನಿರ್ಮಾಣಗೊಳ್ಳುತ್ತಿರುವ ನೂತನ ಜಿಲ್ಲಾ ಸಂಕೀರ್ಣ ಕಟ್ಟಡ ಕಾಮಗಾರಿ ಸ್ಥಳಕ್ಕೆ ಶನಿವಾರ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಭೇಟಿ ನೀಡಿ ಪರಿಶೀಲಿಸಿದರು.

ನಂತರ ಮಾತನಾಡಿ, ಜಿಲ್ಲಾ ಸಂಕೀರ್ಣ ಕಟ್ಟಡವು 48 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣವಾಗುತ್ತಿದ್ದು, ನಗರದ ಅಭಿವೃದ್ಧಿಗೆ ಮತ್ತೊಂದು ಮಹತ್ವದ ಹೆಜ್ಜೆಯಾಗಿದೆ. ಜಿಲ್ಲೆಯ ವಿವಿಧ ಸರ್ಕಾರಿ ಇಲಾಖೆಗಳು ಒಂದೇ ಸಂಕೀಣ್ಣದಲ್ಲಿ ಕಾರ್ಯನಿರ್ವಹಿಸುವ ಮೂಲಕ ಸಾರ್ವಜನಿಕರಿಗೆ ಸುಲಭವಾಗಿ ಹಾಗೂ ವೇಗವಾಗಿ ಸೇವೆಗಳು ದೊರೆಯುವಂತೆ ಈ ಜಿಲ್ಲಾ ಸಂಕೀರ್ಣ ನಿರ್ಮಾಣವಾಗುತ್ತಿದೆ. ಇದು ಬೀದರ ಜಿಲ್ಲೆಯ ಆಡಳಿತ ವ್ಯವಸ್ಥೆಯನ್ನು ಇನ್ನಷ್ಟು ಪರಿಣಾಮಕಾರಿಯಾಗಿ ರೂಪಿಸಲು ಸಹಾಯಕಾರಿಯಾಗಲಿದೆ ಎಂದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಡಾ.ಗಿರೀಶ ಬದೋಲೆ, ಅಪರ ಜಿಲ್ಲಾಧಿಕಾರಿ ಶಿವಾನಂದ ಬಿ.ಕರಾಳೆ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಹಾಗೂ ಗುತ್ತಿಗೆದಾರರು ಉಪಸ್ಥಿತರಿದ್ದರು.

ರಾಷ್ಟ್ರೀಯ ಲೋಕ ಅದಾಲತನಲ್ಲಿ 163 ಪ್ರಕರಣಗಳು ಇತ್ಯರ್ಥ: ಒಟ್ಟು 4,24,29,000 ರೂ.ಗಳ ಪರಿಹಾರ ಮೊತ್ತವನ್ನು ಮಂಜೂರು



ಕಲಬುರಗಿ,ಮಾ.15-

ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ಉಚ್ಚ ನ್ಯಾಯಾಲಯ ಕಾನೂನು ಸೇವಾ ಸಮಿತಿಯಿಂದ ಕರ್ನಾಟಕ ಹೈಕೋರ್ಟ್ ಕಲಬುರಗಿ ಪೀಠದಲ್ಲಿ ಶನಿವಾರ ಹಮ್ಮಿಕೊಳ್ಳಲಾದ ರಾಷ್ಟ್ರೀಯ ಲೋಕ ಅದಾಲತನಲ್ಲಿ ಮೋಟಾರು ವಾಹನ ವಿಮೆ ಪ್ರಕರಣ, ಸಿವಿಲ್ ಮತ್ತು ಕ್ರಿಮಿನಲ್ ಪ್ರಕರಣಗಳನ್ನು ಸಂಧಾನದ ಮೂಲಕ 163 ಪ್ರಕರಣಗಳನ್ನು ವಿಲೇವಾರಿಗೊಳಿಸಿ ಒಟ್ಟು 4,24,29,000 ರೂ.ಗಳ ಪರಿಹಾರ ಮೊತ್ತವನ್ನು ಮಂಜೂರು ಮಾಡಲಾಗಿದೆ ಎಂದು ಕರ್ನಾಟಕ ಹೈಕೋರ್ಟ್ ಕಲಬುರಗಿ ಪೀಠದ ಕಾನೂನು ಸೇವಾ ಸಮಿತಿಯ ಕಾರ್ಯದರ್ಶಿಗಳಾದ ಬಸವರಾಜ ಚೇಂಗಟಿ ಅವರು ತಿಳಿಸಿದ್ದಾರೆ. ಇದೇ ಸಂದರ್ಭದಲ್ಲಿ ಕೌಟುಂಬಿಕ ಕಲಹದಿಂದ ಬೇರ್ಪಟ್ಟ ದಂಪತಿಗಳನ್ನು ಸಹ ನ್ಯಾಯಮೂರ್ತಿಗಳ ಸಮುಮ್ಮುಖದಲ್ಲಿ ರಾಜಿ ಸಂದಾನ ಮಾಡಿ ಒಂದುಗೂಡಿಸಲಾಯಿತು. ಈ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಕರ್ನಾಟಕ ಹೈಕೋರ್ಟಿನ ಗೌರವಾನ್ವಿತ ನ್ಯಾಯಮೂರ್ತಿಗಳಾದ ಎಸ್.ವಿಶ್ವಜಿತ್ ಶೆಟ್ಟಿ ಹಾಗೂ ಜಿ.ಬಸವರಾಜ ಅವರು ಉಪಸ್ಥಿತರಿದ್ದರು.

ಒಂದನೇಯ ಪುಟದಿಂದ

4 ರಾಜ್ಯ, ಒಂದು ಕೇಂದ್ರಾಡಳಿತ ಪ್ರದೇಶದ ಚುನಾವಣೆಯ ದಿನಾಂಕ ಘೋಷಣೆ

ಉಪಚುನಾವಣೆ: ಕರ್ನಾಟಕದ ಎರಡು ಕ್ಷೇತ್ರಗಳಿಗೆ ಎಪ್ರಿಲ್ 09 ರಂದು ಉಪ ಚುನಾವಣೆ ನಡೆಯಲಿದೆ. ಶಾಮನೂರು ಶಿವಶಂಕರಪ್ಪ ಅವರ ನಿಧನದಿಂದ ತೆರವಾಗಿರುವ ದಾವಣಗೆರೆ ದಕ್ಷಿಣ ಕ್ಷೇತ್ರ ಮತ್ತು ಹೆಚ್ ವೈ ಮೇಟಿ ಅವರ ಅಗಲಿಕೆಯಿಂದ ತೆರವಾಗಿರುವ ಬಾಗಲಕೋಟೆ ಕ್ಷೇತ್ರಕ್ಕೂ ಎಪ್ರಿಲ್ 09 ರಂದು ಉಪಚುನಾವಣೆ ನಡೆಯಲಿದೆ. ಮೇ 4 ರಂದು ಫಲಿತಾಂಶ ಪ್ರಕಟವಾಗಲಿದೆ ಎಂದು ಭಾರತದ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಭಾನುವಾರ ಘೋಷಿಸಿದರು.

ಮಾನಸಿಕವಾಗಿ ಭಾವನಾತ್ಮಕವಾಗಿ ಸದೃಢ ರಾಗಬೇಕಾಗಿದೆ - ಕಿಲ್ಲೆಶ್ರೀ

ಬಗೆಹರಿಸಲು ಸಹಾಯ ಮಾಡಲು ಅವಕಾಶ ನೀಡುತ್ತಾ ಕುಟುಂಬ ಸದಸ್ಯರು ಬಂಧುಗಳು ಕರೆಕೊಟ್ಟರು 2011 ರಿಂದ ಕಾರಾಗೃಹ ಅಧಿಕಾರಿ ಸಿಬ್ಬಂದಿಯವರ ಕುಟುಂಬ ಕಲ್ಯಾಣ ಇಲಾಖೆ ಕಲ್ಯಾಣ ದಿನಾಚರಣೆಯನ್ನು ಆಚರಿಸಲಾಗುತ್ತಿದೆ ಎಂದರು ಕಾರ್ಯಕ್ರಮದಲ್ಲಿ ಕಲಾ ಸಂಕುಲ ಸಂಸ್ಥೆಯ ಕಾರ್ಯದರ್ಶಿ ಮಾರುತಿ ಬಡಿಗೇರ್ ಹಿರಿಯ ವರದಿಗಾರರಾದ ಹೆಚ್ ವೀರನಗೌಡ ಸರ್ಕಾರಿ ನೌಕರರ ಸಂಘದ ಅಧ್ಯಕ್ಷರಾದ ಕೃಷ್ಣ ಶಾವಂತಗೇರಾ ಜಿಲ್ಲಾ ಕಾರ್ಯಗೃಹ ಅಧ್ಯಕ್ಷಕಿ ಅನಿತಾ ಹಿರೇಮನಿ ರಾಜಕುಮಾರ ಮಾನಸಿಕ ವೈದ್ಯರು ಮನೋಹರ್ ಪತ್ತಾರ್ ಸಿಬ್ಬಂದಿಗಳಾದ ವಿರುಪಾಕ್ಷಿ ಜೆ ಎಂ ರಸ್ತಗಿರಿ ಸಾವಿತ್ರಿ ಚಂದ್ರಕಲಾ ಲಿಂಗಸುಗೂರು ಅದಿಕ್ಷಕರು ವೆಂಕಟೇಶ್ ನಾಯಕ್ ಆರ್ ಎಂ ಪಾಟೀಲ್ ಲಕ್ಷ್ಮಣ್ ಕೈಲಾಸ ಗೋಡಿಹಾಳ ಎಲ್ ಗೌಡ ರಾಜಾಸಾಬ್ ವಿಜಯ್ ಕುಮಾರ್ ಶಿವಮಾನಪ್ಪ ಮಹಾಲಕ್ಷ್ಮಿ ಶಾಂತಮ್ಮ ಸಿದ್ದಲಿಂಗಪ್ಪ ಸಣ್ಣ ಲಿಂಗಪ್ಪ ಸೇರಿದಂತೆ ಇತರರು ಭಾಗಿಯಾಗಿದ್ದರು

ಆಲಮಟ್ಟಿ ಡ್ಯಾಮ್ ಎತ್ತರಿಸಲು ನಮ್ಮ ಹೋರಾಟಕ್ಕೆ ಬಜೆಟ್ನಲ್ಲಿ ಸಕಾರಾತ್ಮಕ ಸ್ಪಂದನೆ: ಮುಜಾಹಿದ್ ಮರ್ಚೆಡ್

ನಂತರ, ಇಂದ್ರಜೀತ್ ಯಾದವ್ ಮಾತನಾಡಿ ರೈತರು ಶ್ರಮ ಪಟ್ಟು ಬೆಳೆದರೆ ಮಾತ್ರ ವಿಶ್ವಕ್ಕೆ ಅನ್ನ ಇಲ್ಲದಿದ್ದರೆ ಮಣ್ಣು ತಿನ್ನಬೇಕಾಗಿತ್ತು ಅದಕ್ಕೆ ರೈತ ದಿನಾಚರಣೆ ಅತಿ ಮುಖ್ಯ ಎಂದರು ಶ್ರಮಕ್ಕೆ ಬೆಂಬಲ ಸಿಕ್ಕಾಗ ಮಾತ್ರ ರೈತ ಖುಷಿಯಾಗಿರಲು ಸಾಧ್ಯ ಎಂದರು, ತದನಂತರ ಮಾತನಾಡಿದ ಮುಜಾಹಿದ್ ಮರ್ಚೆಡ್ ನಮ್ಮ ಸಂಘಟನೆಯಿಂದ ಕಳೆದ ಫೆಬ್ರವರಿ 9 ರಂದು ರೈತರ ನಡೆ ಆಲಮಟ್ಟಿ ಕಡೆ ಹೋರಾಟ ಹಮ್ಮಿಕೊಂಡು ಕೃಷ್ಣ ಮೇಲ್ದಂಡೆ ಯೋಜನೆ ಹಂತ 3 ಅನುಷ್ಠಾನ ಆಗಲು ಆಲಮಟ್ಟಿ ಜಲಾಶಯವನ್ನು ಸುಮಾರು 17 ಅಡಿ ಎತ್ತರಿಸಬೇಕು ಆವಾಗ ಮಾತ್ರ ಯು.ಕೆ.ಪಿ.3 ಅನುಷ್ಠಾನ ಮಾಡಿ ರೈತರಿಗೆ ನೀರು ಕೊಡಲು ಸಾಧ್ಯವಾಗುತ್ತದೆ ಅದರಂತೆ ನಮ್ಮ ಹೋರಾಟಕ್ಕೆ ಸ್ಪಂದಿಸಿ ಸರಕಾರ ಈ ಬಜೆಟ್ನಲ್ಲಿ ಆಲಮಟ್ಟಿ ಡ್ಯಾಂ ಎತ್ತರಿಕರಣದಿಂದ ಮುಳುಗಡೆ ಆಗುವ ಭೂಮಿಗೆ ಪ್ರತಿ ಎಕರೆಗೆ 30-40 ಲಕ್ಷಗಳು ಘೋಷಣೆ ಮಾಡಿ ಸಕಾರಾತ್ಮಕವಾಗಿ ಸ್ಪಂದಿಸಿದೆ ಎಂದು ಮುಜಾಹಿದ್ ಮರ್ಚೆಡ್ ಖುಷಿ ವ್ಯಕ್ತಪಡಿಸಿದರು ಹಾಗೂ ಸಂಪೂರ್ಣ ಅನುಷ್ಟಾನಕ್ಕೆ ಒತ್ತು ನೀಡಲು ಸರಕಾರಗಳಿಗೆ ಎಚ್ಚರಿಸಿದರು, ಸಭಾಸಾರತಿ ದೇವರಾಜ ಯಳಿ ಎಲ್ಲಾ ಮುಖಂಡರು ಹಾಗೂ ರೈತರಿಗೆ ಸನ್ಮಾನವನ್ನು ಮಾಡಿಸುವ ಮೂಲಕ ಕಾರ್ಯಕ್ರಮದ ಯಶಸ್ಸ ನ್ನು ಹೊಗಳಿದರು.

ವಿದ್ಯಾರ್ಥಿಗಳ ಏಳಿಗೆಯಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಗಳ ಪಾತ್ರ ಮಹತ್ವದ್ದು; ಅಭಿನವಶ್ರೀ

ಮರಕಂದಿನ್ನಿ,ಎಂ ಫಕ್ರುದ್ದೀನ್,ಮಲ್ಲಿಕಾರ್ಜುನ ಹೂಗಾರ, ಚನ್ನಪ್ಪ ಬೂದಿನಾಳ,ಸೇರಿದಂತೆ ಶಾಲೆಯ ಮುಖ್ಯೋಪಾಧ್ಯಾಯಿನಿ ಸುಲೋಚನಾ ವಿ ಬಲ್ಕಲ್, ಹಾಗು ಶಿಕ್ಷಕರಾದ ಶರಣಬಸವ ಹಿರೇಮಠ ನಾಗಡದಿನ್ನಿ, ಹಾಗು ಸಿಬ್ಬಂದಿ ಮಕ್ತಂಸಾಬ್, ವಿದ್ಯಾರ್ಥಿಗಳು ಹಾಗು ಪಾಲಕರು ಇದ್ದರು.

ಎನ್‌ಎಸ್‌ಎಸ್ ಶಿಬಿರ ಕಾರ್ಯಕ್ರಮ ವರದಿ

ಹೆಣ್ಣುಮಕ್ಕಳ ವಿವಾಹದ ಕಾನೂನುಬದ್ಧ ವಯಸ್ಸು 18 ವರ್ಷ ಮತ್ತು ಗಂಡುಮಕ್ಕಳ ವಿವಾಹದ ಕಾನೂನುಬದ್ಧ ವಯಸ್ಸು 21 ವರ್ಷ ಎಂದು ವಿವರಿಸಿದರು.

ಅದೇ ರೀತಿ ಅವರು ಕೆಳಗಿನ ವಿಷಯಗಳ ಬಗ್ಗೆ ವಿವರಿಸಿದರು:

ಬಾಲ್ಯ ವಿವಾಹದಿಂದ ಉಂಟಾಗುವ ಆರೋಗ್ಯ ಸಮಸ್ಯೆಗಳು ಮತ್ತು ಶಿಕ್ಷಣದ ಮೇಲೆ ಬೀರುವ ಪರಿಣಾಮಗಳು

ಬಾಲ್ಯ ವಿವಾಹವನ್ನು ಪ್ರೋತ್ಸಾ ಹಿಸುವವರ ವಿರುದ್ಧ ಇರುವ ಕಾನೂನು ಕ್ರಮಗಳು

ಹೆಣ್ಣುಮಕ್ಕಳ ಶಿಕ್ಷಣ ಮತ್ತು ಸಬಲೀಕರಣದ ಮಹತ್ವ

ಸಮಾಜದಲ್ಲಿ ಬಾಲ್ಯ ವಿವಾಹವನ್ನು ತಡೆಗಟ್ಟುವಲ್ಲಿ ಪ್ರತಿಯೊಬ್ಬರ ಪಾತ್ರ

ಈ ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲರಾದ ಶ್ರೀ ವೀರೇಶ್ ರಾಜಗುರು, ಸೀನಿಯರ್ ಲೆಕ್ಚರರ್ ಶ್ರೀ ಚಿದಾನಂದಪ್ಪ, ಹಾಗೂ ಉಪನ್ಯಾಸಕರಾದ ಶ್ರೀ ಮಹೇಶ್, ಶ್ರೀ ಹನುಮಂತ, ಶ್ರೀ ಸತೀಶ್ ನಾಯಕ್, ಶ್ರೀ ಶರಣಪ್ಪ, ಶ್ರೀ ರಂಗಸ್ವಾಮಿ, ಶ್ರೀ ರಂಗನಾಥ, ಮಿಸ್ ಕೀರ್ತಿ, ಮಿಸ್ ಅನಿತಾ ನಾಯಕ್ ಮತ್ತು ಎಲ್ಲಾ ಎನ್‌ಎಸ್‌ಎಸ್ ವಿದ್ಯಾರ್ಥಿಗಳು ಉಪಸ್ಥಿತರಿದ್ದರು

ಲಿಂಗಸಗೂರು: ರಾಷ್ಟ್ರೀಯ ಗೋರಸೇನಾ ತಾಲ್ಲೂಕು ಘಟಕದ ಪುನಾರಚನೆ. ಹಾಗೂ ತರಬೇತಿ ಶಿಬಿರದ ಕುರಿತು ಸಮಾಲೋಚನಾ ಸಭೆ

ಗಾಗಿ ವಿಶೇಷ ತರಬೇತಿ ಶಿಬಿರವನ್ನು ಆಯೋಜಿಸಲು ಸರ್ವಾನುಮತದಿಂದ ನಿರ್ಧರಿಸಲಾಯಿತು.


ಪೂರ್ವ ಸಿದ್ಧತೆ: ಕಾರ್ಯಾಗಾರದ ಯಶಸ್ವಿಗಾಗಿ ಕೈಗೊಳ್ಳಬೇಕಾದ ಕಾರ್ಯತಂತ್ರಗಳು, ಸ್ಥಳ ನಿಗದಿ ಮತ್ತು ಪೂರ್ವಭಾವಿ ಸಿದ್ಧತೆಗಳ ಕುರಿತು ಸಭೆಯಲ್ಲಿ ನೀಲನಕ್ಷೆ ಸಿದ್ಧಪಡಿಸಲಾಯಿತು.

ಸಭೆಯಲ್ಲಿ ಉಪಸ್ಥಿತರಿದ್ದ ಮುಖಂಡರು ಮತ್ತು ಕಾರ್ಯಕರ್ತರು ಸಂಘಟನೆಯ ಬೆಳವಣಿಗೆಗೆ ಶ್ರಮಿಸುವ ಬಗ್ಗೆ ಒಮ್ಮತದ ನಿರ್ಧಾರ ತಳೆದರು. ತಾಲ್ಲೂಕಿನಾದ್ಯಂತ ಗೋರಸೇನೆಯ ತತ್ವಗಳನ್ನು ಪಸರಿಸಲು ಮತ್ತು ಯುವ ಜನತೆಯನ್ನು ಸಂಘಟಿಸಲು ಈ ಸಭೆಯು ನಾಂದಿಯಾಯಿತು.

ಈ ಸಂದರ್ಭದಲ್ಲಿ ಸಂಘಟನೆಯ ಪ್ರಮುಖ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ಬಾಗಲಕೋಟೆ ಸರಕಾರಿ ವೈದ್ಯಕೀಯ ಕಾಲೇಜಿಗೆ ಶಂಕುಸ್ಥಾಪನೆ

ಜಿಲ್ಲೆಯ ಆರೋಗ್ಯ ಸೇವೆಗಳಿಗೆ ಮತ್ತಷ್ಟು ಬಲ : ಸಿಎಂ ಸಿದ್ದರಾಮಯ್ಯ



ಬಾಗಲಕೋಟೆ:, ಮಾ.15-

ಜಿಲ್ಲೆಯಲ್ಲಿ ವೈದ್ಯಕೀಯ ಕಾಲೇಜ ಸ್ಥಾಪನೆಯಿಂದಾಗಿ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ವೈದ್ಯಕೀಯ ಶಿಕ್ಷಣ ಪಡೆಯಲು ಹೆಚ್ಚಿನ ಅವಕಾಶಗಳು ದೊರೆಯುವದರ ಜೊತೆಗೆ ಆರೋಗ್ಯ ಸೇವೆಗಳು ಮತ್ತಷ್ಟು ಬಲವಾಗಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ನವನಗರದ ಯುನಿಟ್-1, ಸೆಕ್ಟರ ನಂ.1ರಲ್ಲಿ ಶನಿವಾರ ಜಿಲ್ಲಾಡಳಿತ, ಜಿ.ಪಂ ಹಾಗೂ ರಾಜೀವಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಬೆಂಗಳೂರು ಸಹಯೋಗದಲ್ಲಿ ಹಮ್ಮಿಕೊಂಡ ವೈದ್ಯಕೀಯ ಕಾಲೇಜ ಶಂಕುಸ್ಥಾಪನೆ ಹಾಗೂ ವಿವಿಧ ಅಭಿವೃದ್ದಿ ಕಾಮಗಾರಿಗಳ ಉದ್ಘಾಟನೆ ಮತ್ತು ಯುಕೆಪಿ ಹಂತ-3ರ ಭೂ ಸ್ವಾಧೀನಗೊಳ್ಳುವ ಜಮೀನುಗಳಿಗೆ ಒಪ್ಪಂದದ ದರದಂತೆ ಪರಿಹಾರ ವಿತರಣಾ ಕಾರ್ಯಕ್ರಮಕ್ಕೆ ಚಾಲನೆ ಅವರು ಮಾತನಾಡಿದರು.

ಬಾಗಲಕೋಟೆ ಸರ್ಕಾರಿ ಮೆಡಿಕಲ್ ಕಾಲೇಜಿನ ಶಂಕುಸ್ಥಾಪನೆಯಾಗಲು ದಿ.ಹೆಚ್.ವೈ.ಮೇಟಿಯವರೇ ಕಾರಣ. 2025ರ ಬಜೆಟ್‌ನಲ್ಲಿ ಘೋಷಣೆಯಾದ ಮೆಡಿಕಲ್ ಕಾಲೇಜ್‌ಗೆ ಇಂದು ಶಂಕುಸ್ಥಾಪನೆ ಮಾಡುವ ಮೂಲಕ ದಿ.ಎಚ್.ವಾಯ್. ಮೇಟಿಯವರ ಕನಸು ನನಸು ಮಾಡಲಾಗಿದೆ. ಇದರಿಂದ ಗ್ರಾಮೀಣ ಭಾಗದ ಜನತೆಗೆ ಉತ್ತಮ ಮತ್ತು ಸುಲಭ ವೈದ್ಯಕೀಯ ಸೇವೆ ದೊರೆಯಲಿವೆ. ಬಾಗಲಕೋಟೆಯ ನಂತರ ಕೋಲಾರ ಹಾಗೂ ಮಂಗಳೂರಿನಲ್ಲಿ ಮೆಡಿಕಲ್ ಕಾಲೇಜು ಸ್ಥಾಪನೆಗೆ ಕ್ರಮಕೈಗೊಳ್ಳಲಾಗುತ್ತಿದೆ. ರಾಜ್ಯದಲ್ಲಿ ಈಗಾಗಲೇ 25 ಜಿಲ್ಲೆಗಳಲ್ಲಿ ಮೆಡಿಕಲ್ ಕಾಲೇಜ ಸ್ಥಾಪಿಸಲಾಗಿದೆ ಎಂದರು.

ಗ್ಯಾರಂಟಿ ಯೋಜನೆಗಳ ಸಮರ್ಪಕ ಅನುಷ್ಠಾನದ ಜೊತೆಗೆ ಅಭಿವೃದ್ಧಿಯನ್ನು ಸಮಾನ ಆದ್ಯತೆ ನೀಡುತ್ತಿದ್ದೇವೆ. ಪ್ರತಿ ವರ್ಷ ಗ್ಯಾರಂಟಿ ಯೋಜನೆಗಳಿಗೆ ಸುಮಾರು 50 ಸಾವಿರ ಕೋಟಿ ರೂ.ಗಳ ವೆಚ್ಚ ಮಾಡಲಾಗುತ್ತಿದ್ದು, ಇದುವರೆಗೆ 1.22 ಲಕ್ಷ ಕೋಟಿಗಳನ್ನು ವೆಚ್ಚ ಮಾಡಲಾಗಿದೆ. ಯುಕೆಪಿ ಹಂತ-3 ಭೂಸ್ವಾಧೀನಗೊಳ್ಳುವ ಜಮೀನುಗಳಿಗೆ. ಈ ವರ್ಷ ಭೂ ಪರಿಹಾರಕ್ಕಾಗಿ 3 ಸಾವಿರ ಕೋಟಿ ರೂ. ಮೀಸಲಿಡಲಾಗುತ್ತಿದೆ. ಹೆಚ್ಚುವರಿಯಾಗಿ ಬಜೆಟ್ ಸಪ್ಲಿಮೆಂಟರಿಯಲ್ಲಿ ಸಹ 5 ಸಾವಿರ ಕೋಟಿ ರೂ. ಹಣ ಕೊಡಲಾಗುತ್ತಿದೆ. ಈಗಾಗಲೇ ಸ್ವಯಂಪ್ರೇರಣೆಯಿಂದ ಭೂಮಿ ನೀಡುವ ರೈತರಿಗೆ ನೀರಾವರಿ ಜಮೀನಿಗೆ 40 ಲಕ್ಷ ರೂ, ಹಾಗೂ ಖುಷ್ಕಿ ಜಮೀನಿಗೆ 30 ಲಕ್ಷ ರೂ. ನೀಡಲು ಸರ್ಕಾರ ನಿರ್ಣಯಿಸಿದಂತೆ ಪರಿಹಾರ ವಿತರಣೆಗೆ ಚಾಲನೆ ನೀಡಲಾಗಿದೆ ಎಂದರು.

ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಮಾತನಾಡಿ ಈ ಭಾಗದ ಭಾಗ್ಯದ ಬಾಗಿಲು ತೆರೆಯಲು ನಾವೆಲ್ಲರೂ ಸೇರಿದ್ದೇವೆ. ದಿ.ಎಚ್.ವಾಯ್.ಮೇಟಿಯವರ ಕನಸಾಗಿದ್ದ ಮೆಡಿಕಲ್ ಕಾಲೇಜು ಸ್ಥಾಪನೆ ಇಂದು ನೆರವೇರಿಸಲಾಗಿದೆ. ಮೇಟಿಯವರ ಇಲ್ಲದಿದ್ದರೂ ಸಹ ಅವರ ಆಲೋಚನೆ, ಪರಿಶ್ರಮ ಹಾಗೂ ಚಿಂತನೆಗಳಿಗೆ ಸಾಕಾರಗೊಳಿಸುವ ಕೆಲಸ ಮಾಡಲಾಗುತ್ತಿದೆ. ನಾವು ಮಾಡುವ ಪ್ರತಿ ಕೆಲಸದಲ್ಲೂ ಆದರ್ಶವಿರಬೇಕು. ಇಂದು ಮೆಡಿಕಲ್ ಕಾಲೇಜು ಬಡವರಿಗಾಗಿ ಸ್ಥಾಪನೆ ಮಾಡಲಾಗುತ್ತಿದೆ. ಖಾಸಗಿ ಆಸ್ಪತ್ರೆಯವರು ಹಣ ವಸೂಲಿ ಮಾಡುತ್ತಿದ್ದಾರೆ, ಅದನ್ನು ತಪ್ಪಿಸಲು ಪ್ರತಿ ಜಿಲ್ಲೆಯಲ್ಲಿ ಮೆಡಿಕಲ್ ಕಾಲೇಜು ಸ್ಥಾಪಿಸಲಾಗುತ್ತಿದೆ. ಯುಕೆಪಿ ಹಂತ-3ರ ಯೋಜನೆಯ ಭೂಸಂತ್ರಸ್ತರಿಗೆ ಈ ವರ್ಷವೇ 1.33 ಲಕ್ಷ ಎಕರೆಗೆ ಹಣವನ್ನು ಕೊಡಲು ತೀರ್ಮಾನ ಮಾಡಿ ಚೆಕ್ ಕೊಡಲು ಹೊರಟಿದ್ದೇವೆ ಎಂದರು.

ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಮ್ಮಾಪೂರ ಮಾತನಾಡಿ ಹಲವಾರು ಹೋರಾಟದ ಫಲವಾಗಿ ಹಾಗೂ ದಿ.ಎಚ್.ವಾಯ್.ಮೇಟಿ ಅವರ ಸತತ ಪ್ರಯತ್ನದಿಂದಾಗಿ ಜಿಲ್ಲೆಯಲ್ಲಿ ಸರಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆಗೆ ಕಾರಣವಾಯಿತು. ಈ ಭಾಗದ ನೀರಾವರಿ ಯೋಜನೆಗೆ ಹೆಚ್ಚಿನ ಒತ್ತು ನೀಡಲಾಗುತ್ತಿದೆ. ಭೂಸ್ವಾಧೀನಕ್ಕೆ ಒಳಪಡುವ ರೈತರ ಜಮೀನುಗಳಿಗೆ ಪರಿಹಾರ ವಿತರಣೆಗೆ ಚಾಲನೆ ನೀಡಲಾಗಿದೆ. ಐಹೊಳೆ ಪ್ರವಾಸಿ ತಾಣದಲ್ಲಿರುವ ಮನೆಗಳ ಸ್ಥಳಾಂತರ ಕಾರ್ಯ, ಕೆರೆ ತುಂಬಿಸುವ ಕೆಲಸಕ್ಕೆ ಚಾಲನೆ ನೀಡಬೇಕೆಂದು ಮುಖ್ಯಮಂತ್ರಿಗಳಲ್ಲಿ ಮನವಿ ಮಾಡಿಕೊಂಡರು.

ಬೃಹತ್ ಮತ್ತು ಮದ್ಯಮ ಕೈಗಾರಿಕೆ ಸಚಿವ ಎಂ.ಬಿ.ಪಾಟೀಲ ಮಾತನಾಡಿ ರೈತರ ಬಗ್ಗೆ ಕಾಳಜಿ ಹೆಚ್ಚಿನ ಕಾಳಜಿಯನ್ನು ಮುಖ್ಯ ಮಂತ್ರಿಗಳು ಹೊಂದಿದ್ದಾರೆ. ಈ ಭಾಗದ ಭೂಸ್ವಾಧೀನಕ್ಕೊಳಗಾದ ರೈತರಿಗೆ ಉತ್ತಮ ಪರಿಹಾರ ವಿತರಣೆ ಕ್ರಮಕೈಗೊಂಡಿದ್ದಾರೆ. ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳೆ ಮಾತನಾಡಿ ಲೋಕೋಪಯೋಗಿ ಇಲಾಖೆಯಿಂದ ಜಿಲ್ಲೆಗೆ 6.5 ಕೋಟಿ ಎಸ್‌ಸಿಪಿ ಹಾಗೂ 2 ಕೋಟಿ ಟಿಎಸ್‌ಪಿಯಲ್ಲಿ ನೀಡಲಾಗಿದೆ. ಈ ವರ್ಷ ಅಭಿವೃದ್ದಿಗೆ ಕೆಲಸಕ್ಕೆ 60 ಕೋಟಿ ನೀಡಲಾಗುತ್ತಿದೆ ಎಂದರು.

ಪ್ರವಾಸೋದ್ಯಮ ಸಚಿವ ಎಚ್.ಕೆ.ಪಾಟೀಲ ಮಾತನಾಡಿ ಉತ್ತರ ಕರ್ನಾಟಕಕ್ಕೆ ಮೆಡಿಕಲ್ ಕಾಲೇಜು ಸ್ಥಾಪಿಸಿರುವುದು ಉತ್ತಮ ಕೊಡುಗೆಯಾಗಿದೆ. ವೈದ್ಯಕೀಯ ಶಿಕ್ಷಣದ ಜೊತೆಗೆ ಇದರ ಉಪಯೋಗ ಆರೋಗ್ಯ ರಕ್ಷಣೆಗೆ ಬಹುಪಾಲಾಗಿದೆ. ಯುಕೆಪಿ ಹಂತ-3 ಪೂರ್ಣಗೊಂಡಲ್ಲಿ ನೀರಾವರಿ ಯೋಜನೆಯಿಂದ ರೈತರ ಬಾಳು ಹಸನಾಗಲಿದೆ ಎಂದರು. ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ದಿ ಸಚಿವ ಡಾ.ಶರಣಪ್ರಕಾಶ ಪಾಟೀಲ ಮಾತನಾಡಿ 450 ಕೋಟಿ ರೂ.ಗಳ ವೆಚ್ಚದಲ್ಲಿ ಮೆಡಿಕಲ್ ಕಾಲೇಜ ಸ್ಥಾಪನೆಗೆ ಶಂಕುಸ್ಥಾಪನೆ ನೆರವೇರಿಸಲಾಗಿದೆ. ರಾಜ್ಯ ಸರಕಾರ ಪ್ರತಿ ಜಿಲ್ಲೆಯಲ್ಲಿ ಮೆಡಿಕಲ್ ಕಾಲೇಜು ಸ್ಥಾಪನೆಗೆ ಸಂಕಲ್ಪಹೊಂದಿದೆ. ರಾಜ್ಯದಲ್ಲಿ ಪ್ರತಿ ವರ್ಷ 4 ಸಾವಿರಕ್ಕು ಹೆಚ್ಚು ಸೀಟುಗಳು ದೊರೆಯುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣ ಸಚಿವ ಮಹಾದೇವಪ್ಪ, ಬೀಳಗಿ ಶಾಸಕ ಹಾಗೂ ಹಟ್ಟಿ ಚಿನ್ನದಗಣಿ ನಿಯಮಿತದ ಅಧ್ಯಕ್ಷ ಜೆ.ಟಿ.ಪಾಟೀಲ, ಹುನಗುಂದ ಶಾಸಕ ಹಾಗೂ ರಾಜ್ಯ ವೀರಶೈವ ಲಿಂಗಾಯತ ಅಭಿವೃದ್ದಿ ನಿಗಮದ ಅಧ್ಯಕ್ಷ ವಿಜಯಾನಂದ ಕಾಶಪ್ಪನವರ, ಶಾಸಕರಾದ ಸಿದ್ದು ಸವದಿ, ಭೀಮಸೇನ ಚಿಮ್ಮನಕಟ್ಟಿ, ರಾಜ್ಯ ಕೈಗಾರಿಕಾ ಹಾಗೂ ಮೂಲ ಸೌಕರ್ಯ ಅಭಿವೃದ್ದಿ ನಿಗಮದ ಅಧ್ಯಕ್ಷ ಎಸ್.ಜಿ.ನಂಜಯ್ಯನಮಠ, ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅನೀಲಕುಮಾರ ದಡ್ಡಿ ಸೇರಿದಂತೆ ಇತರೆ ಗಣ್ಯಮಾನ್ಯರು ಹಾಗೂ ಅಧಿಕಾರಿ ವರ್ಗದವರು ಉಪಸ್ಥಿತರಿದ್ದರು.

ಕಲ್ಯಾಣ ಕರ್ನಾಟಕ ವಲಯ ಮಟ್ಟದ ನಮ್ಮೂರ ಶಾಲೆ ಉಳಿಸಿ ಸಮಾವೇಶಕಲ್ಯಾಣ ಕರ್ನಾಟಕದ ಸರ್ಕಾರಿ ಶಾಲೆಗಳನ್ನು ಕೊಲ್ಲಲು ಕೆಕೆಆರ್‌ಡಿಬಿ ನಿಧಿ ಬಳಕೆ- ಅಕ್ಷಮ್ಯ ಅಪರಾಧ

ಕಲಬುರಗಿ,ಮಾ.14-ಕಲ್ಯಾಣ ಕರ್ನಾಟಕ ಭಾಗದ ಜನರ ಅಭಿವೃದ್ಧಿಗಾಗಿ ಮೀಸಲಿರುವ ಕೆಕೆಆರ್ಡಿಬಿ ನಿಧಿಯನ್ನು ಕೆಪಿಎಸ್ ಮ್ಯಾಗ್ನೆಟ್ ಶಾಲೆಗಳ ಹೆಸರಲ್ಲಿ ಈ ಭಾಗದ ಸರಕಾರಿ ಶಾಲೆಗಳನ್ನು ಮುಚ್ಚಲು ಬಳಸುತ್ತಿರುವುದನ್ನು ಹಾಗೂ ಸರಕಾರಿ ಶಾಲೆಗಳನ್ನು ಮುಚ್ಚಿ ಬಡಜನರ ಮಕ್ಕಳನ್ನು ಶಿಕ್ಷಣದಿಂದ ವಂಚಿತರನ್ನಾಗಿಸುವ ಸರಕಾರದ ನಡೆಯನ್ನು ಖಂಡಿಸಿ ಕಲ್ಯಾಣ ಕರ್ನಾಟಕ ವಲಯ ಮಟ್ಟದ ಸಮಾವೇಶವು ಎಐಡಿಎಸ್‌ಓ ವಿದ್ಯಾರ್ಥಿ ಸಂಘಟನೆ ಹಾಗೂ ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳ ಸಾರ್ವಜನಿಕ ಶಿಕ್ಷಣ ಉಳಿಸಿ ಸಮಿತಿಗಳ ನೇತೃತ್ವದಲ್ಲಿ ನಗರದ ಡಾ.ಎಸ್.ಎಂ ಪಂಡಿತ್ ರಂಗಮಂದಿರದಲ್ಲಿ ಇಂದು ಜರುಗಿತು.



ಸಮಾವೇಶದ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಅಲ್ಲಮ ಪ್ರಭು ಬೆಟ್ಟದೂರು ರವರು ಮಾತನಾಡುತ್ತ, ಕೋಳಿ ಕೂಗುವ ಕಡೆಯಲೆಲ್ಲಾ ಸರ್ಕಾರಿ ಶಾಲೆಗಳಿರಬೇಕು. ಈ ಕೆಪಿಎಸ್ ಮ್ಯಾಗ್ನೆಟ್ ಇದಕ್ಕೆ ತದ್ವಿರುದ್ಧವಾಗಿದೆ. ಕೊಪ್ಪಳ ಜಿಲ್ಲೆಯ 300 ಮಕ್ಕಳು ಓದುವ ಹಿರೇಬಗನಾಳ್ ಶಾಲೆ ಮುಚ್ಚಿ ಹಿತ್ನಾಳು ಶಾಲೆಗೆ ವಿಲೀನ ಮಾಡುವುದು ಸರಿಯಿಲ್ಲ. ಆ ಮಕ್ಕಳನ್ನು ದೂರದ ಊರಿಗೆ ಕಳುಹಿಸಲು ಬಸ್ ವ್ಯವಸ್ಥೆ ಏನು? ಆ ಬಸ್ಸಿ ಗೆ ಹಣ ನೀಡುವವರು ಯಾರು? ಈ ಅವ್ಯವಸ್ಥೆಯನ್ನು ಜನರ ಮೇಲೆ ಹೇರುತ್ತಿರುವ ಜನ ವಿರೋಧಿ ಸರ್ಕಾರಕ್ಕೆ ಧಿಕ್ಕಾರ ಶಿಕ್ಷಣ ಕೇಂದ್ರೀಕರಣವು ಪ್ರಜತಾಂತ್ರಿಕ ಶಿಕ್ಷಣಕ್ಕೆ ವಿರೋಧವಾಗಿದೆ. ಅದಕ್ಕಾಗಿ ನಿರಂತರ ಹೋರಾಟ ಅವಶ್ಯಕ'' ಎಂದು ಕರೆ ನೀಡಿದರು.

ಸಮಾವೇಶದ ಮುಖ್ಯ ಭಾಷಣಕಾರರಾದ ಎಐಡಿಎಸ್‌ಓ ರಾಜ್ಯ ಅಧ್ಯಕ್ಷರಾದ ಅಶ್ವಿನಿ ಕೆ. ಎಸ್ ಅವರು ಮಾತನಾಡುತ್ತ ಕಲ್ಯಾಣ ಕರ್ನಾಟಕ ಭಾಗದ ಜನರ ಅಭಿವೃದ್ಧಿಗಾಗಿ ಮೀಸಲಿರುವ ಕೆಕೆಆರ್ ಡಿಬಿ ನಿಧಿಯನ್ನು ನಮ್ಮ ಭಾಗದ ಸರಕಾರಿ ಶಾಲೆಗಳನ್ನು ಮುಚ್ಚಲು ಬಳಸುತ್ತಿರುವುದು ಕರ್ನಾಟಕ ರಾಜ್ಯ ಸರ್ಕಾರ ಈ ಭಾಗದ ಜನರಿಗೆ ಎಸಗುತ್ತಿರುವ ದೊಡ್ಡ ದ್ರೋಹವಾಗಿದೆ. ಪ್ರತಿಯೊಂದು ಮಗುವಿಗೂ ಉಚಿತವಾಗಿ ಶಿಕ್ಷಣ ಸಿಗಬೇಕು ಎಂಬ ಜ್ಯೋತಿಬಾ ಫುಲೆ, ಸಾವಿತ್ರಿಬಾಯಿ ಫುಲೆ, ಈಶ್ವರ ಚಂದ್ರ ವಿದ್ಯಾಸಾಗ್ರ ಪಂಡಿತ್ ತಾರಾನಾಥ್, ಕುದ್ಮುಲ್ ರಂಗರಾವ್ ರಂತಹ ಮಹಾನ್ ವ್ಯಕ್ತಿಗಳ ಆಶಯಗಳನ್ನು ಗಾಳಿಗೆ ತೂರಿ ತರುತ್ತಿರುವ ಈ ಅನ್ಯಾಯದ ವಿರುದ್ಧ, ಬಡ ಮಕ್ಕಳನ್ನು ಶಾಶ್ವತವಾಗಿ ಶಿಕ್ಷಣದಿಂದ ದೂರ ಇಡುವ ಕೆಪಿಎಸ್ ಮ್ಯಾಗ್ನೆಟ್ ಯೋಜನೆಯ ವಿರುದ್ಧ ಇಡೀ ರಾಜ್ಯದಾದ್ಯಂತ ಬಲಿಷ್ಠ ಹೋರಾಟಗಳು ನಡೆಯಿತ್ತಿದ್ದು, ಈ ಹೋರಾಟವನ್ನು ಇನ್ನಷ್ಟು ತೀವ್ರವಾಗಿ ಮುನ್ನೆಡೆಸುವ ಸಂಕಲ್ಪವನ್ನು ತೊಡುತ್ತಾ ರಾಜ್ಯದ ಜನತೆ ಎಪ್ರಿಲ್ 8 ರಂದು ರಾಜ್ಯ ಮಟ್ಟದ ಸಮಾವೇಶಕ್ಕೆ ಮುನ್ನಡೆಯಬೇಕು ಎಂದು ಕರೆ ಕೊಟ್ಟರು.

ರಾಜ್ಯ ರೈತ ಸಂಘದ ಕರ್ನಾಟಕ ರಾಜ್ಯ ಗೌರವಧ್ಯಕ್ಷರಾದ ಚಾಮರಸ ಮಾಲಿ ಪಾಟೀಲ್ ರವರು, ಹೈದ್ರಾಬಾದ್ ಕರ್ನಾಟಕ ಜನಾಂದೋಲನ ಕೇಂದ್ರದ ಸಂಸ್ಥಾಪಕರಾದ ರಾಘವೇಂದ್ರ ಕುಷ್ಟಗಿ ರವರು, ವಿದ್ಯಾನಿಧಿ ಪದವಿ ಪೂರ್ವ ಕಾಲೇಜು, ರಾಯಚೂರು ನ ಪ್ರಾಂಶುಪಾಲರಾದ ಡಾ. ಚಂದ್ರ ಗಿರೀಶ್ ರವರು, ಎಐಕೆಕೆಎಂಎಸ್ ರಾಜ್ಯ ಕಾರ್ಯದರ್ಶಿ ಭಗವಾನ್ ರೆಡ್ಡಿ, ಎಐಎಂಎಸ್‌ಎಸ್ ರಾಜ್ಯ ಅಧ್ಯಕ್ಷರಾದ ಎಂ. ಎನ್ ಮಂಜುಳಾ, ಎಐಡಿವೈಓ ರಾಜ್ಯ ಅಧ್ಯಕ್ಷ ರಾದ ಶರಣಪ್ಪ ಉದ್ಬಾಳ್, ರಾಜ್ಯ ಕಾರ್ಯದರ್ಶಿ ಮಂಡಳಿ ಸದಸ್ಯರು ವಿ. ಜಿ. ದೇಸಾಯಿಯವರು ವೇದಿಕೆ ಮೇಲೆ ಉಪಸ್ಥಿತರಿದ್ದರು.

ಎಐಡಿಎಸ್‌ಓ ರಾಜ್ಯ ಖಜಾಂಚಿ ಸುಭಾಷ್ ಬಿ. ಜೆ ರವರು ಪ್ರಾಸ್ತಾವಿಕ ನುಡಿಗಳನ್ನಾಡಿದರು. ಸಮಾವೇಶದ ಅಧ್ಯಕ್ಷತೆಯನ್ನು ಎಐಡಿಎಸ್‌ಓ ರಾಜ್ಯ ಉಪಾಧ್ಯಕ್ಷರಾದ ಅಭಯಾ ದಿವಾಕರ್ ರವರು ವಹಿಸಿದ್ದರು.

ಸಮಾವೇಶದಲ್ಲಿ ನಾಡಿನ ಅನೇಕ ಶಿಕ್ಷಣ ತಜ್ಞರು, ಸಾಮಾಜಿಕ ಹೋರಾಟಗಾರರು, ಜನಪರ ಸಂಘಟನೆಗಳ ಮುಖಂಡರು ಸೇರಿದಂತೆ ಕಲ್ಯಾಣ ಕರ್ನಾಟಕದ ಬೀದರ್, ಕಲಬುರ್ಗಿ,ಯಾದಗಿರಿ, ರಾಯಚೂರು, ಕೊಪ್ಪಳ, ಬಳ್ಳಾರಿ ವಿಜಯನಗರ ಜಿಲ್ಲೆಗಳ ಹಳ್ಳಿ ಹಳ್ಳಿಗಳಿಂದ ಬಂದ ನೂರಾರು ವಿದ್ಯಾರ್ಥಿಗಳು ನಮ್ಮ ಶಾಲೆ ನಮ್ಮ ಹಕ್ಕು, ನಮ್ಮೂರ ಶಾಲೆ ಮುಚ್ಚಲು ಬಿಡುವುದಿಲ್ಲ ಎಂಬ ಹೋರಾಟದ ಘೋಷಣೆ ಮೊಳಗಿಸಿದರ ಮೂಲಕ ಪಾಲ್ಗೊಂಡಿದ್ದರು.

ಜವಾಬ್ದಾರಿ ವಹಿಸಿಕೊಂಡವರೇ ಭವಿಷ್ಯದ ನಾಯಕರು: ಮೌನೇಶ ಹಿರೇಹಣಗಿ



ಸಿರವಾರ,ಮಾ.15-

ವಿದ್ಯಾರ್ಥಿ ದೆಸೆಯಲ್ಲಿ ಯಾರು ಸವಾಲುಗಳನ್ನು ಎದುರಿಸಿ ಧೈರ್ಯದಿಂದ ಜವಾಬ್ದಾರಿಗಳನ್ನು ವಹಿಸಿಕೊಳ್ಳುತ್ತಾರೋ, ಅಂತಹವರು ಮಾತ್ರ ಭವಿಷ್ಯದಲ್ಲಿ ಉತ್ತಮ ನಾಯಕರಾಗಿ ಹೊರಹೊಮ್ಮಲು ಸಾಧ್ಯ ಎಂದು ಸಿರವಾರ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಶ್ರೀ ಮೌನೇಶ ಹಿರೇಹಣಗಿ ಹೇಳಿದರು.

ಯರಾಮರಸದ ವೀರಭದ್ರೇಶ್ವರ ಮಠದಲ್ಲಿ ಸಿರವಾರದ ಬಸವೇಶ್ವರ ಪ್ರಥಮ ದರ್ಜೆ ಕಾಲೇಜು ಹಾಗೂ ರಾಯಚೂರಿನ ಆದಿಕವಿ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಎನ್‌ಎಸ್‌ಎಸ್ () ವಿಶೇಷ ಶಿಬಿರದಲ್ಲಿ 'ವಿದ್ಯಾರ್ಥಿಗಳಲ್ಲಿ ನಾಯಕತ್ವ ಗುಣ' ಎಂಬ ವಿಷಯದ ಕುರಿತು ಅವರು ವಿಶೇಷ ಉಪನ್ಯಾಸ ನೀಡಿದರು.

ನಾಯಕತ್ವದ ಗುಣ: ಕೇವಲ ಅಧಿಕಾರ ಚಲಾಯಿಸುವುದು ನಾಯಕತ್ವವಲ್ಲ, ಜವಾಬ್ದಾರಿಯನ್ನು ಹಂಚಿಕೊಂಡು ಎಲ್ಲರನ್ನೂ ಒಟ್ಟಾಗಿ ಕರೆದೊಯ್ಯುವುದು ನಿಜವಾದ ನಾಯಕತ್ವದ ಲಕ್ಷಣ ಎಂದು ವಿದ್ಯಾರ್ಥಿಗಳಿಗೆ ಮನವರಿಕೆ ಮಾಡಿಕೊಟ್ಟರು.ವ್ಯಕ್ತಿತ್ವ ವಿಕಸನ: ಶಿಬಿರಾರ್ಥಿಗಳು ಇಂತಹ ಸಾಮಾಜಿಕ ಸೇವಾ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವುದರಿಂದ ಸಂಘಟನಾ ಶಕ್ತಿ ಮತ್ತು ನಾಯಕತ್ವದ ಗುಣಗಳು ಬೆಳೆಯುತ್ತವೆ ಎಂದು ತಿಳಿಸಿದರು.

ಗಣ್ಯರ ಉಪಸ್ಥಿತಿ:ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಲೇಜಿನ ಅಧ್ಯಕ್ಷರಾದ ಶ್ರೀಮತಿ ಅನುರಾಧ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ / ನೌಕರರ ಸಂಘದ ಅಧ್ಯಕ್ಷರಾದ ಶ್ರೀ ಯೇಸುಮಿತ್ರಾ, ಕಾಲೇಜಿನ ಪ್ರಾಚಾರ್ಯರಾದ ಡಾ. ಧರ್ಮಣ್ಣ ಪಾಲ್ಗೊಂಡು ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದರು.

ಈ ಸಂದರ್ಭದಲ್ಲಿ ಕಾಲೇಜಿನ ಉಪನ್ಯಾಸಕರಾದ ಮಾರುತಿ, ಸುರೇಶ, ವೈಜಾನಾಥ್ ಸೇರಿದಂತೆ ಎನ್‌ಎಸ್‌ಎಸ್ ಶಿಬಿರಾರ್ಥಿಗಳು ಹಾಗೂ ಮಠದ ಭಕ್ತಾದಿಗಳು ಉಪಸ್ಥಿತರಿದ್ದರು.

ಸಿರುಗುಪ್ಪ : ಶ್ರೀ ಕೃಷ್ಣದೇವರಾಯ ಶಾಲೆಯಲ್ಲಿ ಭಾರತೀಯ ಸೌಟ್ಸ್ ಮತ್ತು ಗೈಡ್ಸ್ ನಿಂದ ಬೇಸಿಗೆ ಶಿಬಿರ ಆರಂಭ

ಸಿರುಗುಪ್ಪ - ನಗರದ ಶ್ರೀ ಕೃಷ್ಣದೇವರಾಯ ಶಾಲೆಯಲ್ಲಿ ಭಾರತೀಯ ಸ್ಕೌಟ್ಸ್ ಮತ್ತು ಗೈಡ್ಸ್ ಕರ್ನಾಟಕ ಜಿಲ್ಲಾ ಸಂಸ್ಥೆ ಬಳ್ಳಾರಿ ಸ್ಥಳೀಯ ಸಂಸ್ಥೆ ಸಿರುಗುಪ್ಪ ತಾಲೂಕು ಘಟಕದಿಂದ ಬೇಸಿಗೆ ಶಿಬಿರವನ್ನು ಆರಂಭಿಸಲಾಯಿತು ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಸಿರುಗುಪ್ಪ ಕಾರ್ಯದರ್ಶಿ ನಟರಾಜ ಸ್ವಾಮಿ ನಳಂದ ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷ ಎಲಿಗಾರ್ ವೆಂಕಟೇಶ್ ಕಾರ್ಯದರ್ಶಿ ವೈ ರಾಮಾದೇವಿ ಶಾಲೆಯ ಆಡಳಿತಾಧಿಕಾರಿ ಸೌಜನ್ಯ ರಾಷ್ಟ್ರೀಯ ಸಾಕ್ಷರತಾ ಅಬ್ದುಲ್ ನಬಿ ಶಾಲೆಯ ಮುಖ್ಯ ಗುರುಗಳಾದ ಜೈ ಅಮರೇಶ್ ಕಬ್ಸ್ ಮಾಸ್ಟರ್ ಮಂಜುನಾಥ ಕಬ್ಸ್ ಬುಲ್ ಬುಲ್ಸ್ ಸ್ಕೌಟ್ಸ್ ಮಕ್ಕಳು ಭಾಗವಹಿಸಿದ್ದರು.

ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಆಗದಂತೆ ಕ್ರಮ ವಹಿಸಿ-ಸಚಿವರ ಈಶ್ವರ ಬಿ.ಖಂಡ್ರೆ



ಬೀದರ, ಮಾರ್ಚ.15-

ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಆಗದಂತೆ ಅಗತ್ಯ ಕ್ರಮ ವಹಿಸುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅಧಿಕಾರಿಗಳಿಗೆ ಸೂಚಿಸಿದರು.

ಅವರು ಶನಿವಾರ ಜಿಲ್ಲಾ ಪಂಚಾಯತ ಕಚೇರಿ ಸಭಾಂಗಣದಲ್ಲಿ ಜಿಲ್ಲೆಯಲ್ಲಿ ಕುಡಿಯುವ ನೀರಿನ ಅಭಾವ ಸರಿದೊಗಿಸುವ ಸಂಬಂಧ ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಕುರಿತು ಕರೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಔರಾದ್ ಮತ್ತು ಭಾಲ್ಕಿ ಬೇರೆ ಬೇರೆ ತಾಲ್ಲೂಕಿನಲ್ಲಿ ಕುಡಿಯುವ ನೀರಿನ ಸಮಸ್ಯೆ ಆಗಬಹುದು ಎಂದು ಇಲಾಖೆ ಅಧಿಕಾರಿಗಳು ವರದಿ ನೀಡಿದ್ದು, ಮುಂಜಾಗ್ರತಾ ಕ್ರಮವಾಗಿ ಎಲ್ಲ ಸಿದ್ಧತೆ ಮಾಡಿಕೊಳ್ಳಲಾಗಿದೆ, ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಕಂಡು ಬಂದಲ್ಲಿ 24 ತಾಸುಗಳ ಒಳಗಡೆ ಸಮಸ್ಯೆ ಬಗೆಹರಿಸಬೇಕೆಂದು ಸೂಚಿಸಲಾಗಿದೆ. ಬೋರವೆಲ್ ಬತ್ತಿ ಹೋದರೆ ಅಥವಾ ಬಾವಿಯಲ್ಲಿ ನೀರು ಇರದೇ ಇದ್ದರೆ ಟ್ಯಾಂಕರ ಮುಖಾಂತರ ನೀರು ಸರಬರಾಜು ಮಾಡಬೇಕು. ಇಲ್ಲವಾದಲ್ಲಿ ಖಾಸಗಿ ಬೋರವೆಲ್ ಬಾಡಿಗೆ ಪಡೆಯಬೇಕು. ಜಿಲ್ಲೆಯ ತಾಂಡಾ, ಹಟ್ಟಿ ಪ್ರದೇಶ ಸೇರಿದಂತೆ ಎಲ್ಲಿಯೂ ಕುಡಿಯುವ ನೀರಿಗೆ ತೊಂದರೆ ಆಗದಂತೆ ನೋಡಿಕೊಳ್ಳಬೇಕು. ನಗರದ ಕೆಲ ಬಡಾವಣೆಗಳಲ್ಲಿ ಸ್ವಲ್ಪ ನೀರಿನ ಸಮಸ್ಯೆ ಕಂಡುಬಂದಿದೆ ಅಲ್ಲಿಯೂ ಪರಿಹಾರ ನೀಡಬೇಕು. ಈಗಾಗಲೇ ಸರ್ಕಾರ ಮಟ್ಟದಲ್ಲಿ ಟಾಸ್ಕ್ ಪೋರ್ಸ್ ಸಮಿತಿಗೆ ಅನುದಾನ ಬಿಡುಗಡೆ ಮಾಡುವಂತೆ ಸರ್ಕಾರ ಪರಿಗಣಿಸಿದೆ. ಕುಡಿಯುವ ನೀರಿನ ಸಮಸ್ಯೆ ಆಗದಂತೆ ನೋಡಿಕೊಳ್ಳಲಾಗುವುದು ಎಂದರು.

ಗೃಹ ಬಳಕೆಯ ಸಿಲಿಂಡರಗಳು ವಿತರಿಸಲಾಗುತ್ತಿದ್ದು, ಯಾವುದೇ ಕೊರತೆ ಇರುವುದಿಲ್ಲ, ವಾಣಿಜ್ಯ ಬಳಕೆ ಸಿಲಿಂಡರಗಳು ಒಂದು ವಾರದಿಂದ ಹತ್ತು ದಿನಗಳವರೆಗೆ ವಿತರಣೆಗೆ ಸಮಸ್ಯೆ ಇದೆ ಎಂದು ಕೇಂದ್ರ ಸರ್ಕಾರ ಹೇಳಿದ್ದು, ಸಾರ್ವಜನಿಕರು ಯಾವುದೇ ವದಂತಿಗಳಿಗೆ ಕೀವಿಗೊಡಬಾರದು.

ಇದೇ ಸಂದರ್ಭದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ಜಿಲ್ಲೆಯಲ್ಲಿ ನಡೆಯುವ ಕಾಮಗಾರಿಗಳು ಬಗ್ಗೆ ಪ್ರಗತಿ ಪರಿಶೀಲಿಸಿದರು.

ಈ ಸಭೆಯಲ್ಲಿ ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಡಾ.ಗಿರೀಶ ಬದೋಲೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ, ಮಹಾನಗರ ಪಾಲಿಕೆ ಆಯುಕ್ತರಾದ ಮುಕುಲ್ ಜೈನ್, ಜಿಲ್ಲಾ ಉಪ ಅರಣ್ಯ ಸಂರಕ್ಷಣಾಧಿಕಾರಿಗಳಾದ ಆಶೀಷ್ ರೆಡ್ಡಿ, ಬಸವಕಲ್ಯಾಣ, ಬೀದರ ಸಹಾಯಕ ಆಯುಕ್ತರು, ತಾಲ್ಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಎಸ್ಎಸ್ಎಲ್ಸಿ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಸಮಾರಂಭ



ರಾಯಚೂರು,ಮಾ.15-

ತಾಲೂಕಿನ ಸರ್ಕಾರಿ ಪ್ರೌಢಶಾಲೆ ಉಡಮುಗಲ ಖಾನಾಪೂರದಲ್ಲಿ ಎಸ್ .ಎಸ್ .ಎಲ್ ಸಿ ಯ ವಿದ್ಯಾರ್ಥಿಗಳ ಬಿಳ್ಕೊಡುವ ಸಮಾರಂಭ.ಸರಸ್ವತಿ ಪೂಜೆ.ಹಾಗೂ ಶಾಲೆಯ 2025ನೇ ಸಾಲಿನ ಟಾಪರ್ಸ್ ವಿದ್ಯಾರ್ಥಿಗಳಿಗೆ ಸನ್ಮಾನ ಸಮಾರಂಭ ಕಾರ್ಯಕ್ರಮವು ದಿನಾಂಕ 14.03.2025ರಂದು ಜರುಗಿತು.

ಮೊದಲಿಗೆ ಸರಸ್ವತಿಯ ಪೂಜೆ ಕಾರ್ಯಕ್ರಮದಲ್ಲಿ ಶಾಲಾ ಎಸ್. ಡಿ. ಎಂ. ಸಿ ಅಧ್ಯಕ್ಷರಾದ ಖಾನಾಪೂರದಯ್ಯ ಹಾಗೂ ಸದಸ್ಯರಾದ ವೀರೇಶ್ ಪೂಜಾರಿ ಅವರು ಸರಸ್ವತಿಯ ಭಾವಚಿತ್ರಕ್ಕೆ ಮಾಲಾರ್ಪಣೆ ಮತ್ತು ಪುಷ್ಪಾರ್ಪಣೆ ಮಾಡಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಶಾಲೆಯ ಕನ್ನಡ ಕಲಾ ಶಿಕ್ಷಕರು ಹಾಗೂ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸಹ ಕಾರ್ಯದರ್ಶಿಯಾದ ಡಾ ದಂಡಪ್ಪ ಬಿರಾದಾರ್ ಮಾತನಾಡುತ್ತಾ.ಕಳೆದ ಸಲ ಪರೀಕ್ಷೆ ನಮ್ಮ ಶಾಲೆಯ ಬಹಳ ಉತ್ತಮವಾಗಿತ್ತು.ಈ ಸಲ ಎಸ್ ಎಸ್ ಎಲ್ ಸಿ ಪರೀಕ್ಷೆ ಅದಕ್ಕಿಂತಲೂ ಅತ್ಯುತ್ತಮವಾಗಿ ಬರಬೇಕು. ವಿದ್ಯಾರ್ಥಿಗಳ ಶೈಕ್ಷಣಿಕ ಸಾಧನೆಗಾಗಿ ಹಲವಾರು ರೂಪರೇಷೆಗಳನ್ನು ಮಾಡಲಾಗಿದೆ.ಈ ಸಲದ ಫಲಿತಾಂಶಕ್ಕಾಗಿ ಹೆಚ್ಚು ಮುತುವರ್ಜಿಯನ್ನು ವಹಿಸಿ ಹಲವಾರು ಯೊಜನೆಗಳನ್ನು ಮಾಡಿದೆ. ನಮ್ಮ ಶಾಲಾ ವಿದ್ಯಾರ್ಥಿಗಳು ಈ ಸಲ ಬೋರ್ಡ ಪರೀಕ್ಷೆಯಲ್ಲಿ 625ಕ್ಕೆ 625 ಅಂಕಗಳನ್ನು ಗಳಿಸಿದರೆ ನಮ್ಮ ತಂದೆಯವರಾದ ದಿವಂಗತ ಅಯ್ಯಪ್ಪ ಬಿರಾದಾರ ಇವರ ಹೆಸರಿನ ಮೇಲೆ ಒಂದು ತೊಲೆ ಬಂಗಾರವನ್ನು ಕೊಡುತ್ತೇನೆ.ಜೊತೆಗೆ ಶಿಕ್ಷಣ ಪ್ರೇಮಿಗಳು ಸರಳ ಜೀವಿಗಳು ಸದಾ ಕ್ರಿಯಾಶೀಲತೆಯನ್ನು ರೂಢಿಸಿಕೊಂಡಿರುವ ರಾಯಚೂರಿನ ತಾಲೂಕಿನ ತಾಲೂಕ ದಂಡಾಧಿಕಾರಿಗಳು ಹಾಗೂ ತಹಶಿಲ್ದಾರಾದ ಸುರೇಶ್ ವರ್ಮ ಅವರು ನಮ್ಮ ಶಾಲೆಗೆ ಭೇಟಿ ನೀಡಿ ಮಕ್ಕಳ ಶೈಕ್ಷಣಿಕ ಸಾಧನೆ.ಎಸ್ ಎಸ್ ಎಲ್ ಸಿ ವಿದ್ಯಾರ್ಥಿಗಳ ಅಭ್ಯಾಸದ ಕುರಿತು ಸಲಹೆ ಸೂಚನೆಗಳನ್ನು ನೀಡಿ. ಅವರು ಸಹ ಒಂದು ತೊಲೆ ಬಂಗಾರವನ್ನು ಕೊಡುವುದಾಗಿ ಶಾಲಾ ಶಿಕ್ಷಕರ ಹಾಗೂ ವಿದ್ಯಾರ್ಥಿಗಳ ಸಮಕ್ಷಮದಲ್ಲಿ ಪ್ರಕಟಣೆ ಮಾಡಿದ್ದಾರೆ.

ಆದ್ದರಿಂದ ವಿದ್ಯಾರ್ಥಿಗಳೇ ಚೆನ್ನಾಗಿ ಓದಿರಿ ಈಗಾಗಲೇ ನಮ್ಮ ಶಾಲಾ ಶಿಕ್ಷಕರು ಸಕಲರು ಅತ್ಯಂತ ಮುತು ವರ್ಜವಹಿಸಿ ತಮ್ಮನ್ನು ಪರೀಕ್ಷೆ ಸಲುವಾಗಿ ಅತ್ಯುತ್ತಮವಾಗಿ ಸಿದ್ದ ಮಾಡಿದ್ದಾರೆ.ಪರೀಕ್ಷೆಯಲ್ಲಿ ಉತ್ತಮ ರೀತಿಯಲ್ಲಿ ಏರ್ಥೆ ಆಗುವುದರ ಮೂಲಕ ಶಿಕ್ಷಣ ಕಲಿಸಿದವರಿಗೂ ಮತ್ತು ಶಾಲೆಗೆ ಕೀರ್ತಿ ತಂದು ನಾವು ಕೊಡುವ ಕಾಣಿಕೆ ಅಥವಾ ಬಹುಮಾನವನ್ನು ಪಡೆದು ಶಾಲಿ ಇಲಾಖೆಗೆ ಕೀರ್ತಿ ತರಬೇಕೆಂದು ಡಾ. ಬಿರಾದಾರ ಹೇಳಿದರು. ಶಾಲಾ ಮುಖ ಗುರುಗಳಾದ ವೀರೇಶ್ ಅಂಗಡಿ ಮಾತನಾಡುತ್ತಾ ನಮ್ಮ ಶಾಲಾ ಶಿಕ್ಷಕ ವೃಂದದವರು ವಿಶೇಷವಾಗಿ ಈ ಸಲ ಹೆಚ್ಚು ಆಸಕ್ತಿವಹಿಸಿ ವಿಶೇಷ ತರಗತಿಗಳನ್ನು ಅಚ್ಚುಕಟ್ಟಾಗಿ ಮಾಡಿದ್ದಾರೆ.ಈಗಾಗಲೇ ಬಿರಾದರ ಸರ್ ಅವರು ಕೆಲವು ವಿಷಯಗಳಲ್ಲಿ ನೂರಕ್ಕೆ ನೂರು ಅಂಕಗಳಿಸಿದಂತ ವಿದ್ಯಾರ್ಥಿಗಳಿಗೆ ಬೆಳ್ಳಿ ಪದಕ ನೀಡಿ ಅವರು ಜುಲೈ 20 25 ರಲ್ಲಿ ಸನ್ಮಾನಿಸಿದ್ದರು.

ಈ ಸಲ ಮತ್ತೆ 625ಕ್ಕೆ 625 ಅಂಕಗಳನ್ನು ಗಳಿಸಿದರೆ ಅವರು ಮತ್ತು ತಹಶೀಲ್ದಾರ್ ಸುರೇಶ್ ವರ್ಮಾ ಸರ್ ಒಂದು ತೊಲೆ ಬಂಗಾರ ಪ್ರಕಟಣೆ ಮಾಡಿದ್ದಾರೆ. ಅವರಿಗೆ ಶಾಲಾವತಿಯಿಂದ ಧನ್ಯವಾದಗಳು.ಇಂದು ಸಹ ಮೂವರು ವಿದ್ಯಾರ್ಥಿಗಳಿಗೆ ಬಿರಾದಾರ ಅವರ ತಂದೆಯವರಾದ ದಿವಂಗತ ಅಯ್ಯಪ್ಪ ಬಿರಾದಾರ ಹೆಸರಿನ ಮೇಲೆಈ ವರ್ಷ ಸನ್ಮಾನವನ್ನ ಮಾಡಿದ್ದಾರೆ.ಮತ್ತು ಕನ್ನಡ ವಿಷಯದಲ್ಲಿ125ಕ್ಕೆ 125 ಅಂಕಗಳನ್ನು ಗಳಿಸಿದ ಪಲ್ಲವಿ ಹೂಗಾರರಿಗೆ ಸರಸ್ವತಿ ಶಿಕ್ಷಕಿಯು ಅವರು ಒಂದು ಸಾವಿರ ನಗುದು ಬಹುಮಾನವನ್ನ ನೀಡಿದ್ದಾರೆ. ಅದೇ ರೀತಿಯಾಗಿ ಹಿಂದಿ ವಿಷಯದಲ್ಲಿ ನೂರಕ್ಕೆ ನೂರು ಅಂಕಗಳು ಗಳಿಸಿದ ಶ್ರೀಧರ್ ಇವರಿಗೆ ನಫೀಸ ಅಂಜುವಮ್ ಶಿಕ್ಷಕಿಯು ಒಂದು ಸಾವಿರ ಬಹುಮಾನವನ್ನ ನೀಡಿದ್ದಾರೆ.

ನಮ್ಮ ಶಾಲಾ ಶಿಕ್ಷಕರಿಂದ ನಿಮ್ಮ ಮೇಲಿರುವ ಅಭಿಮಾನ. ಪ್ರೀತಿ.ಗೌರವ ಎಷ್ಟೇ ಇದೆ ಎಂಬುದು ಇದು ಎಲ್ಲವೂ ಸಾಕ್ಷಿಯಾಗಿವೆ. ಆ ನಿಟ್ಟಿನಲ್ಲಿ ತಾವು ಚೆನ್ನಾಗಿ ಅಭ್ಯಾಸ ಮಾಡಬೇಕು ನಿಮ್ಮ ಶೈಕ್ಷಣಿಕೆ ಸಾಧನೆ ನಮ್ಮ ಶಾಲೆಗೆ ಕೀರ್ತಿ ಎಂದು ಹೇಳಿದರು .ಮಕ್ಕಳ ಕಾರ್ಯ ಚಟುವಟಿಕೆಗಳು ಕುರಿತು ಅಭ್ಯಾಸದ ಕುರಿತು ಶಾಲಾ ಶಿಕ್ಷಕಿಯರಾದ .ಸಾವಿತ್ರಿ. ವೀಣಾ ಕುಲಕರ್ಣಿ. ಶಿವಲೀಲಾ ನಫಿಜಾ ಅಂಜುಮ್ ರವರು ಮಾತನಾಡಿದರು. ಸರಸ್ವತಿ ಶಿಕ್ಷಕಿಯು ಶಾಲಾ ವರದಿಯನ್ನು ಓದಿದರು. ಶಾಲಾ ದೈಹಿಕ ಶಿಕ್ಷಣ ಶಿಕ್ಷಕರು. ತಾಲೂಕ ದೈಹಿಕ ಶಿಕ್ಷಣ ಪ್ರವೀಕ್ಷಕರಾದ ಪರಶುರಾಮು ಕಾರ್ಯಕ್ರಮವನ್ನು ಅಚ್ಚು ಕಟ್ಟಾಗಿ ನಿರೂಪಣೆ ಮಾಡಿದರು .

ಎಸ್ ಎಸ್ ಎಲ್ ಸಿ ವಿದ್ಯಾರ್ಥಿಗಳಾದ ಪ್ರಮೋದ್ ಕುಮಾರ್ .ತನುಜಾ ಗೀತಾ .ಅಂಕಿತಾ .ಸೇರಿದಂತೆ ಇನ್ನಿತರರು ವಿದ್ಯಾರ್ಥಿಗಳು ತಮ್ಮ ಅನಿಸಿಕೆಗಳನ್ನು ಹೇಳಿದರು .ಇದೇ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಸಾಂಕೇತಿಕವಾಗಿ ಎಸ್ ಎಸ್ ಎಲ್ ಸಿ ಯ ಹಾಲ್ ಟಿಕೆಟ್ ನೀಡಲಾಯಿತು. ಗೋಯಿಂಗ್ ಟು ಸ್ಕೂಲ್, ಎನ್. ಜಿ.ಒ.ಸಂಸ್ಥೆಯ ನರಸಪ್ಪ .ನೀಲಕಂಠ ರಾಯ. ಕಾರ್ಯಕ್ರಮ ಆಯೋಜನೆ ಮಾಡುವ ಕಾರ್ಯವನ್ನು ಅಚ್ಚುಕಟ್ಟಾಗಿ ನಿರ್ವಹಿಸಿದರು . ನಂತರ ವಿದ್ಯಾರ್ಥಿಗಳಿಗೆ ಸಿಹಿ ಭೋಜನ ವ್ಯವಸ್ಥೆಯನ್ನು ಮಾಡಲಾಯಿತು.

ಸಿರುಗುಪ್ಪ: ರಾಜೀವ್ ಗಾಂಧಿ ಎಸ್ಎಸ್ಎಲ್ಸಿ ಮಕ್ಕಳಿಗೆ ಬೀಳ್ಕೊಡುಗೆ



ಸಿರುಗುಪ್ಪ,ಮಾ.15-

ನಗರದ ರಾಜೀವ್ ಗಾಂಧಿ ಎಂ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಹಮ್ಮಿಕೊಂಡ ಎಸ್ ಎಸ್ ಎಲ್ ಸಿ ಮಕ್ಕಳಿಗೆ ಬೀಳ್ಕೊಡುಗೆ ಸಮಾರಂಭದಲ್ಲಿ ಮಕ್ಕಳಿಗೆ ಶಾಲಾ ವತಿಯಿಂದ ಎಕ್ಸಾಮ್ ಪ್ಯಾಡ್ ಮತ್ತು ಪೆನ್ನುಗಳನ್ನು ವಿತರಿಸಿ ಶುಭ ಹಾರೈಸಲಾಯಿತು ಮಕ್ಕಳು ಸಹ ಶಾಲೆಗೆ 40 ಚೇರ್ ಗಳನ್ನು ಕೊಡುಗೆಯಾಗಿ ನೀಡಿದ್ದಾರೆ ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಣ ಸಂಘದ ನಿಕಟಪೂರ್ವ ಉಪಾಧ್ಯಕ್ಷರು ಎಂ ಅರುಣಾ ಪ್ರತಾಪ ರೆಡ್ಡಿ ಸುಷ್ಮಾ ತಾಲೂಕು ಅಧ್ಯಕ್ಷ ಡಾ ಹೆಚ್ ಗೋಪಾಲ್ ಶಾಲೆಯ ವ್ಯವಸ್ಥಾಪಕ ನಿರ್ದೇಶಕ ಸಿದ್ದಲಿಂಗ ಜೆ ವಸೂತಿ ಮುಖ್ಯ ಶಿಕ್ಷಕಿ ಪ್ರಿಯಾಂಕ ಎಸ್ ವಸೂತಿ ಅಬ್ದುಲ್ ನಬಿ ಶಿಕ್ಷಕರದ ಕೆಎಂ ಮಲ್ಲಿಕಾರ್ಜುನಯ್ಯ ಸ್ವಾಮಿ ಅಲಬನೂರು ಬಿ ಮಂಜುನಾಥ ರೆಡ್ಡಿ ಶಾಲೆಯ ಎಲ್ಲಾ ಸಿಬ್ಬಂದಿ ವರ್ಗ ಹಾಗೂ ಮಕ್ಕಳು ಭಾಗವಹಿಸಿದ್ದರು.

ಇಫ್ತಾರ್ ಕೂಟ ಪ್ರೀತಿ, ಶಾಂತಿ ಮತ್ತು ಸೌಹಾರ್ದತೆಯ ಸೇತುವೆ-ಅರುಣಕುಮಾರ ಪಾಟೀಲ



ಅಫಜಲಪುರ: ಸಾಮೂಹಿಕ ಮುಸ್ಲಿಂ ಸಮುದಾಯದ ಬಾಂಧವರಿಗೆ ಪ್ರತಿವರ್ಷದಂತೆ ಈ ವರ್ಷವೂ ಇಫ್ತಾರ್ ಕೂಟವನ್ನು ಆಯೋಜಿಸಿರುವುದು ಅತ್ಯಂತ ಸಂತೋಷದ ಸಂಗತಿಯಾಗಿದೆ ಎಂದು ಕೆಕೆಆರಟಿಸಿ ಅಧ್ಯಕ್ಷ ಅರುಣಕುಮಾರ ಪಾಟೀಲ ಸಂತಸ ವ್ಯಕ್ತಪಡಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಪವಿತ್ರ ರಂಜಾನ್ ಮಾಸದ ಸಂದರ್ಭದಲ್ಲಿ ಎಲ್ಲ ಮುಸ್ಲಿಂ ಸಹೋದರ-ಸಹೋದರಿಯರಿಗೆ ಹಾರ್ದಿಕ ಶುಭಾಶಯಗಳನ್ನು ತಿಳಿಸುತ್ತಿದ್ದೇನೆ. ನಿಮ್ಮ ಉಪವಾಸ (ರೋಜಾ) ಮತ್ತು ಪ್ರಾರ್ಥನೆಗಳು ನಿಮ್ಮನ್ನು ಅಲ್ಲಾಹನಿಗೆ ಇನ್ನಷ್ಟು ಹತ್ತಿರ ತರಲಿ. ಅಲ್ಲಾಹನು ನಿಮ್ಮ ಎಲ್ಲ ಪ್ರಾರ್ಥನೆಗಳನ್ನು ಸ್ವೀಕರಿಸಿ, ನಿಮಗೆ ಆರೋಗ್ಯ, ಸಮೃದ್ಧಿ ಹಾಗೂ ದೈವಿಕ ಅನುಗ್ರಹವನ್ನು ಕರುಣಿಸಲಿ ಎಂದರು.

ತದನಂತರ ಮಾತನಾಡಿದ ಶಾಸಕ ಎಮ್.ವೈ.ಪಾಟೀಲ ಪವಿತ್ರ ರಂಜಾನ್ ಮಾಸವು ಎಲ್ಲರ ಜೀವನದಲ್ಲಿ ಶಾಂತಿ, ಸೌಹಾರ್ದತೆ ಮತ್ತು ಸಹೋದರತ್ವದ ಸಂದೇಶವನ್ನು ಹರಡಲಿ. ಹಬ್ಬ-ಹರಿದಿನಗಳು ನಮ್ಮನ್ನು ಮತ್ತಷ್ಟು ಒಗ್ಗೂಡಿಸಿ, ಸಮಾಜದಲ್ಲಿ ಐಕ್ಯತೆ ಮತ್ತು ಸ್ನೇಹಭಾವವನ್ನು ಗಟ್ಟಿಗೊಳಿಸುತ್ತವೆ.ಈ ವರ್ಷದ ರಂಜಾನ್ ಇಫ್ತಾರ್ ಕೂಟವೂ ನಮ್ಮ ಸಹೋದರತ್ವ ಮತ್ತು ಸೌಹಾರ್ದತೆಯ ಮತ್ತೊಂದು ಸಂಭ್ರಮದ ಮೈಲಿಗಲ್ಲಾಗಲಿ.ಮತ್ತೊಮ್ಮೆ ಎಲ್ಲರಿಗೂ ರಂಜಾನ್ ಮುಬಾರಕ್ ಎಂದು ಶುಭಾಶಯ ಕೋರಿದರು.

ಇದೆ ಸಂದರ್ಭದಲ್ಲಿ ಮಾಜಿ ಜಿಲ್ಲಾ ಪಂಚಾಯತ ಸದಸ್ಯ ಮತೀನ್ ಪಟೇಲ,ಕೆಪಿಸಿಸಿ ಸದಸ್ಯ ಅಫ್ತಾಬ್ ಪಪ್ಪು ಪಟೇಲ,ಸೇರಿದಂತೆ ಸಾವಿರಾರು ಜನ ಮುಸ್ಲಿಂ ಬಾಂದವರು ಸೇರಿದಂತೆ ತಾಲೂಕಿನ ಎಲ್ಲ ಸಮುದಾಯದ ಮುಖಂಡರು ಉಪಸ್ಥಿತರಿದ್ದರು

ಉಪ್ಪಾರ ಹೊಸಳ್ಳಿ ಮಹಿಳಾ ಜ್ಞಾನ ವಿಕಾಸ ಕಾರ್ಯಕ್ರಮ ನೆಮ್ಮದಿಯ ಜೀವನಕ್ಕೆ ವಾತ್ಸಲ್ಯಮನೆ ಆಸರೆ - ಮಾಜಿ ಶಾಸಕ ಎಂ ಎಸ್ ಸೋಮಲಿಂಗಪ್ಪ



ಸಿರುಗುಪ್ಪ ,ಮಾ.15-

ಅಸಹಾಯಕರ ಬಾಳಿಗೆ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯು ಬೆಳಕಾಗುತ್ತಿದೆ. ವಾತ್ಸಲ್ಯ ಮನೆ ನೆಮ್ಮದಿಯ ಬದುಕಿಗೆ ಆಸರೆಯಾಗಿದೆ ಎಂದು ಜಿಲ್ಲಾ ನಿರ್ದೇಶಕ ರೋಹಿತಾಕ್ಷ ಹೇಳಿದರು.

ತಾಲೂಕಿನ ಉಪ್ಪಾರ ಹೊಸಳ್ಳಿ ಗ್ರಾಮದ ಫಲಾನುಭವಿ ಹೋಟೆಲ್ ನೀಲಮ್ಮ ಅವರಿಗೆ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಮಹಿಳಾ ಜ್ಞಾನ ವಿಕಾಸ ಕಾರ್ಯಕ್ರಮದಡಿಯಲ್ಲಿ ರೂ. 1,35,000/- ವೆಚ್ಚದಲ್ಲಿ ನಿರ್ಮಿಸಿದ ವಾತ್ಸಲ್ಯ ಮನೆಯನ್ನು ಭಾನುವಾರ ಹಸ್ತಾಂತರ ಮಾಡಿ ಮಾತನಾಡಿದರು.

ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಡ, ನಿರ್ಗತಿಕ ಮಹಿಳೆಯರ ಬದುಕಿನಲ್ಲಿ ಆತ್ಮಸ್ಥೈರ್ಯ ತುಂಬುವ ಕೆಲಸ ಮಾಡುತ್ತಿದೆ. ಅನೇಕ ಸಾಮಾಜಿಕ ಕಾರ್ಯಕ್ರಮಗಳ ಮುಖಾಂತರ ಮಹಿಳಾ ಸಬಲೀಕರಣಕ್ಕಾಗಿ ಮಾತೃಶ್ರೀ ಹೇಮಾವತಿ ಅಮ್ಮನವರು ಹಗಲಿರುಳು ಶ್ರಮಿಸುತ್ತಿರುವುದು ನಮ್ಮೆಲ್ಲರ ಸೌಭಾಗ್ಯವಾಗಿದೆ. ಜ್ಞಾನ ವಿಕಾಸ ಕಾರ್ಯಕ್ರಮದಡಿಯಲ್ಲಿ ಸಮಾಜದಲ್ಲಿರುವ ಅತಿ ದುರ್ಬಲ ಮತ್ತು ಅಸಹಾಯಕ ಸ್ಥಿತಿಯಲ್ಲಿರುವ ಕುಟುಂಬಗಳನ್ನು ಗುರುತಿಸಿ ಅವರ ಜೀವನ ನಿರ್ವಹಣೆಗೆ ಬೇಕಾದ ಮಾಸಾಶನ ಹಾಗೂ ಅಗತ್ಯಕ್ಕೆ ಅನುಕೂಲವಾಗುವಂತೆ ವಾತ್ಸಲ್ಯ ಕಿಟ್‌ಗಳನ್ನು ಕೊಡುವುದರೊಂದಿಗೆ ಸೂರು ಇಲ್ಲದವರಿಗೆ ಸ್ವಂತ ಸೂರು ನಿರ್ಮಾಣ ಮಾಡಿ ಕೊಡಲಾಗುತ್ತಿದೆ. ದುಸ್ಥಿತಿಯಲ್ಲಿ ಜೀವಿಸುತ್ತಿರುವ ಅಸಹಾಯಕ ಬಂಧುಗಳಿಗೆ ಕನಿಷ್ಠ ಮೂಲಭೂತ ಸೌಕರ್ಯಗಳನ್ನು ಒದಗಿಸಿ ಜೀವಿತಾವಧಿಯ ಕೊನೆಯ ಕ್ಷಣದಲ್ಲಿ ನೆಮ್ಮದಿಯ ಜೀವನವನ್ನು ಕಲ್ಪಿಸುವುದು ಮಾತೃಶ್ರೀ ಹೇಮಾವತಿ ಅಮ್ಮನವರ ಆಶಯವಾಗಿದೆ, ಈವರೆಗೆ ರಾಜ್ಯಾದ್ಯಾಂತ 18,847 ಜನ ಫಲಾನುಭವಿಗಳು ಮಾಸಾಶನ ಪಡೆಯುತ್ತಿದ್ದು, ರಾಜ್ಯಾದ್ಯಾಂತ 726 ಹೊಸ ಮನೆ ರಚನೆ ಮಾಡಿದ್ದು 166 ಹಳೆ ಮನೆ ದುರಸ್ಥಿ ಮಾಡಲಾಗಿದೆ, ಮತ್ತು 238 ಜನರಿಗೆ ಶೌಚಾಲಯ, ಸ್ನಾನಗೃಹ ರಚನೆ ಮಾಡಿಕೊಡಲಾಗಿದೆ, 61 ಫಲಾನುಭವಿಗಳ ಮನೆಗಳಿಗೆ ಸೋಲಾರ್ ವಿದ್ಯುತ್, ನಲ್ಲಿ ನೀರಿನ ಅಳವಡಿಕೆ ಮಾಡಲಾಗಿದ್ದು, 2049 ಜನರಿಗೆ ವಾತ್ಸಲ್ಯ ಮಿಕ್ಸ್ ಆಹಾರ ಕಿಟ್ ವಿತರಣೆ ಮಾಡಲಾಗಿದೆ, 102 ಜನ ಮಕ್ಕಳಿಗೆ ವಾತ್ಸಲ್ಯ ವಿದ್ಯಾನಿಧಿ ಒದಗಣೆ ಮಾಡಲಾಗಿದ್ದು, 127 ವಾತ್ಸಲ್ಯ ಕುಟುಂಬದ ನೆರವಿಗೆ ಪೋಷಕರನ್ನು ನೇಮಿಸಿದ್ದು ಮತ್ತು ಆಹಾರ ಪೂರೈಕೆಗೆ ಕುಟುಂಬಗಳಿಗೆ 127 ಟಿಫಿನ್ ಬಾಕ್ಸ್ ವಿತರಿಸಲಾಗಿದೆ. ಈವರೆಗೆ ವಾತ್ಸಲ್ಯ ಕಾರ್ಯಕ್ರಮಕ್ಕಾಗಿ 11 ಕೋಟಿ 03 ಲಕ್ಷದ 88 ಸಾವಿರ ರೂಪಾಯಿ ವಿನಿಯೋಗಿಸಲಾಗಿದೆ ಎಂದು ಹೇಳಿದರು.

ವಾತ್ಸಲ್ಯ ಮನೆ ಹಸ್ತಾಂತರ ಕಾರ್ಯಕ್ರಮದಲ್ಲಿ ಮಾತನಾಡಿದ ಮಾಜಿ ಶಾಸಕ ಎಂ ಎಸ್ ಸೋಮಲಿಂಗಪ್ಪ ಧರ್ಮಸ್ಥಳದ ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆಯವರು ಸಮಾಜದಲ್ಲಿ ಇರುವ ಕಡು ಬಡವರು, ನಿರ್ಗತಿಕರು, ಅಸಹಾಯಕರಿಗೆ ಸಹಾಯ ಮಾಡುವುದರ ಮೂಲಕ ಸೂರಿಲ್ಲದವರಿಗೆ ಸೂರು ಕಲ್ಪಿಸಿಕೊಡುತ್ತಿರುವುದು ಶ್ಲಾಘನೀಯ ಇಂತಹ ಕಾರ್ಯಕ್ರಮಗಳು ಗ್ರಾಮದಲ್ಲಿ ಆಗಬೇಕಾದರೆ ಗ್ರಾಮದವರ ಸಹಕಾರವೂ ಅಗತ್ಯವಾಗಿರುತ್ತದೆ ಎಲ್ಲರ ಸಹಕಾರದಲ್ಲಿ ಉತ್ತಮ ಕೆಲಸಗಳು ಆಗಲು ಸಾಧ್ಯವಾಗುತ್ತದೆ ಎಂದರು.

ಇಂತಹ ಕಾರ್ಯಕ್ರಮಗಳಿಗೆ ಪ್ರತಿಯೊಬ್ಬ ಸಹೃದಯಿಗಳು ತಮ್ಮನ್ನ ತಾವು ತೊಡಗಿಸಿಕೊಂಡಲ್ಲಿ ಶೋಚನೀಯ ಸ್ಥಿತಿಯಲ್ಲಿ ಬದುಕುವ ವ್ಯಕ್ತಿಗಳಿಗೆ ಆಸರೆಯಾಗಬಹುದು ಎಂಬ ಅಶಯ ವ್ಯಕ್ತಪಡಿಸಿದರು.

ವಾತ್ಸಲ್ಯ ಫಲಾನುಭವಿ ಹೋಟೆಲ್ ನೀಲಮ್ಮ ಮಾತನಾಡಿ, ಕಳೆದ 10 ವರ್ಷಗಳಿಂದ ಮಳೆಗಾಲದಲ್ಲಿ ಮನೆ ಸೋರುತ್ತಿತ್ತು, ಗೋಡೆ ಕುಸಿಯುವ ಪರಿಸ್ಥಿತಿಯಲ್ಲಿತ್ತು, ಅದೇ ಮನೆಯಲ್ಲಿ ಜೀವ ಕಳೆಯುತ್ತಿದ್ದೆ, ನನ್ನ ಪರಿಸ್ಥಿತಿಯನ್ನು ನೋಡಿ ನನಗೆ ವಾತ್ಸಲ್ಯ ಮನೆ ನಿರ್ಮಿಸಿಕೊಟ್ಟರು, ನಮ್ಮಂತಹ ಅನೇಕ ಅನಾಥರ ಬಾಳಿಗೆ ಸೂರು ಕಲ್ಪಿಸಿಕೊಡುತ್ತಿರುವ ಧರ್ಮಸ್ಥಳದ ಪೂಜ್ಯ ದಂಪತಿಗಳಿಗೆ ಕೋಟಿ-ಕೋಟಿ ನಮನ ಸಲ್ಲಿಸುತ್ತೇನೆ ಎಂದು ಭಾವುಕರಾದರು.

ಕಾರ್ಯಕ್ರಮದಲ್ಲಿ ತಾಲೂಕು ಕ್ಷೇತ್ರ ಯೋಜನಾಧಿಕಾರಿ ಸುಧೀರ್ ಹಂಗಳೂರು, ಗ್ರಾಮ ಪಂಚಾಯತ್ ಅಧ್ಯಕ್ಷೆ ಸುವರ್ಣಮ್ಮ, ತಾಲೂಕು ವಿಚಕ್ಷಣಾಧಿಕಾರಿ ರಾಕೇಶ,

ತಾಲೂಕು ಜ್ಞಾನವಿಕಾಸ ಸಮನ್ವಯಾಧಿಕಾರಿ ಪ್ರಿಯಾ, ಮೇಲ್ವಿಚಾರಕಿ ರಾಧಿಕಾ, ಸೇವಾಪ್ರತಿನಿಧಿ ಶಕುಂತಲಾ, ಊರಿನ ಗಣ್ಯರಾದ ವೆಂಕಟೇಶ, ಶ್ರೀಧರ, ಶ್ರೀನಿವಾರ, ಅರುಣ್ ಕುಮಾರ, ಮೌನೇಶ ಯಾದವ್ ಸ್ವ ಸಹಾಯ ಸಂಘದ ಸದಸ್ಯರು ಉಪಸ್ಥಿತರಿದ್ದರು.

ಕಾರ್ಯಕ್ರಮವನ್ನು ತಾಲೂಕು ಕೃಷಿ ಮೇಲ್ವಿಚಾರಕ ವೀರೇಶ್ ನಿರೂಪಿಸಿ, ಸ್ವಾಗತಿಸಿ, ವಂದಿಸಿದರು.

ಅಪ್ಪನ ಮಾತು ಕೇಳದ ಮಗ!ಕಾಂಗ್ರೆಸ್ ಪಕ್ಷ ಒಡೆದಾಳುವ ನೀತಿ ಅನುಸರಿಸುತ್ತಿರುವ ಅರುಣಕುಮಾರ ಪಾಟೀಲ-ಮಾಲಿಕಯ್ಯ ಗುತ್ತೇದಾರ



ಅಫಜಲಪುರ: ತಾಲೂಕಿನ ರಾಜಕೀಯ ಇತಿಹಾಸದಲ್ಲಿ ಸಹೋದರತ್ವ ಭಾವದಿಂದ ರಾಜಕಾರಣ ಮಾಡುತ್ತ ಬಂದಿರುವ ಮಾಜಿ ಸಚಿವ ಮಾಲಿಕಯ್ಯ ಗುತ್ತೇದಾರ ಹಾಗೂ ಹಾಲಿ ಶಾಸಕ ಎಮ್.ವೈ.ಪಾಟೀಲರು ಕಳೆದ 60 ವರ್ಷದಿಂದ ಪರ-ವಿರೋಧ ಪಕ್ಷದಲ್ಲಿದ್ದರೂ ತಾಲೂಕಿನ ರಾಜಕೀಯದಲ್ಲಿ ಸಣ್ಣ ಅಸಮಧಾನ ಬರದಂತೆ ಸ್ನೇಹಮಯಿಯಾಗಿ ಬಂದಿದ್ದಾರೆ.ಆದರೆ ಇಂದು ಒಂದೇ ಪಕ್ಷದಲ್ಲಿದ್ದರೂ ಸಹ ಯಾವುದೇ ರೀತಿಯ ಅಸಮಧಾನವಿರದ ಉಭಯ ನಾಯಕರು ಕೆಕೆಆರಟಿಸಿ ಅಧ್ಯಕ್ಷರು ಹಾಲಿ ಶಾಸಕರ ಸುಪುತ್ರರಾದ ಅರುಣಕುಮಾರ ಪಾಟೀಲರ ಮೇಲೆ ಬಹಿರಂಗವಾಗಿಯೆ ಸಿಟ್ಟು ಹೊರಹಾಕಿದ್ದಾರೆ.

ರೇವೂರ(ಕೆ) ಗ್ರಾಮದಲ್ಲಿ ಶ್ರೀ ಗುರು ಮಳೇಂದ್ರ ಶಾಖಾ ಮಠದ ಮಂಗಲ ಕಾರ್ಯಾಲಯ ಅಡಿಗಲ್ಲು ಸಮಾರಂಭದ ವೇದಿಕೆಯಲ್ಲಿ ಭಾಗಿಯಾದ ಶಾಸಕ ಎಮ್.ವೈ.ಪಾಟೀಲ ಹಾಗೂ ಮಾಜಿ ಸಚಿವ ಮಾಲಿಕಯ್ಯ ಗುತ್ತೇದಾರರು ಶ್ರೀಗಳ ಸಾನಿಧ್ಯದಲ್ಲಿ ಸರಾಗವಾಗಿ ಬಡೆದುಕೊಂಡು ಬಂದು ತದ ನಂತರ ವೇದಿಕೆ ಕಾರ್ಯಕ್ರಮದಲ್ಲಿ ಮಾತನಾಡಿದ ಮಾಲಿಕಯ್ಯ ಗುತ್ತೇದಾರರು ನನ್ನ ರಾಜಕೀಯ ಪಜೀವನದಲ್ಲಿ ಯಾರೊಂದಿಗೂ ಹೊಂದಾಣಿಕೆ ಮಾಡಿಕೊಳ್ಳದ ಸ್ವಾಭಿಮಾನ ರಾಜಕಾರಣ ಮಾಡಿದ್ದೆನೆ.ಅದರ ಜೊತೆ ಜೊತೆಗೆ ಶಾಸಕ ಎಮ್.ವೈ.ಪಾಟೀಲರು ಹಾಗೆಯೇ ನಡೆದುಕೊಂಡು ಬಂದಿದ್ದಾರೆ.ಆದರೆ ಇಂದು ನಾವಿಬ್ಬರೂ ಒಂದೇ ಪಕ್ಷದಲ್ಲಿರುವುದರಿಂದ ಕಾಂಗ್ರೆಸ್ ಪಕ್ಷ ಸರ್ವಜನಾಂಗದ ಸ್ವಾಭಿಮಾನ ಪಕ್ಷವಾಗಿದ್ದು,ತಂದೆಯ ಮಾತು ಕೇಳದ ಮಗ ಅರುಣಕುಮಾರ ಪಾಟೀಲ ಇಂದು ನನ್ನ ಬೆಂಬಲಿಗರನ್ನು(ಪಕ್ಕಾ ಕಾಂಗ್ರೆಸ್ಸಿಗರನ್ನು) ಯಾವುದೇ ವಿಚಾರಕ್ಕೆ ಪರಿಗಣನೆ ಮಾಡದೆ ಕಡೆಗಣನೆ ಮಾಡುತ್ತಿರುವುದು ಒಳ್ಳೆಯ ಬೆಳವಣಿಗೆಯಲ್ಲ.ಹತ್ತಾರೂ ಬಾರಿ ಶಾಸಕ ಎಮ್.ವೈ.ಪಾಟೀಲರೊಂದಿಗೆ ಈ ವಿಷಯ ಚರ್ಚಿಸಿದ್ದೆನಾದರೂ ಅವರ ಮಾತಿಗೂ ಬೆಲೆ ಕೊಡದೇ ಎಮ್.ವೈ.ಪಾಟೀಲ ಸುಪುತ್ರ ಅರುಣಕುಮಾರ ಪಾಟೀಲ ತಾಲೂಕಿನಲ್ಲಿ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರನ್ನು ಒಡೆದಾಳುತ್ತಿದ್ದಾನೆ.ತಂದೆಯ ಮಾತಿಗೂ ಬೆಲೆ ಕೊಡದ ಅರುಣಕುಮಾರ ಪಾಟೀಲರ ವರ್ತನೆಯಿಂದ ಬೇಸತ್ತ ಅದೆಷ್ಟೋ ಜನ ಕಾರ್ಯಕರ್ತರು ಕಾಂಗ್ರೆಸ್ ಪಾರ್ಟಿ ಬಿಡುವುದಾಗಿ ತಮ್ಮ ಅಳಲನ್ನು ತೊಡಗಿಕೊಂಡಿದ್ದಾರೆ. ಆದರೆ ನಾನು ಅವರನ್ನು ಸಮಾಧಾನ ಪಡಿಸಿ ಪಕ್ಷ ಬಿಡುವ ನಿರ್ಧಾರದಿಂದ ಕೈಬಿಡುವಂತೆ ಮಾಡಿದ್ದೆನೆ.

ಸಾವಿರಾರು ವರ್ಷಗಳ ಇತಿಹಾಸವುಳ್ಳ ಕಾಂಗ್ರೆಸ್ ಪಕ್ಷವು ಯಾವೊಬ್ಬ ಕಾರ್ಯಕರ್ತನನ್ನು ಕಡೆಗಣಿಸಿಲ್ಲ.ಇತ್ತೀಚೆಗೆ ತನಗೆ ತನ್ನ ತಂದೆ ಕೃಪಾಕಟಾಕ್ಷದಿಂದ ಒಂದು ಹುದ್ದೆ ಸಿಕ್ಕಿದೆ ಅಂದ ಮಾತ್ರಕ್ಕೆ ಸರ್ವಾಧಿಕಾರ ತೋರುವುದು ಸರಿ ಅಲ್ಲ.ಕಾಂಗ್ರೆಸ್ ಪಕ್ಷದ ಕಾರ್ಯಕರ್ತರೆಲ್ಲರನ್ನು ಒಂದೆ ಕುಟುಂಬದ ಸದಸ್ಯರಂತೆ ಕೊಂಡ್ಯೊಯಬೇಕು ಎಂದರು. ಕಾರ್ಯಕ್ರಮದಲ್ಲಿದ್ದ ಶಾಸಕ ಎಮ್.ವೈ.ಪಾಟೀಲರಿಗೂ ಕಸಿವಿಸಿ ಉಂಟಾಗಿರುವುದಲ್ಲದೇ,ಕಾರ್ಯಕ್ರಮದಲ್ಲಿ ಭಾಗಿಯಾದ ಜನರಿಗೂ ಬಾಯಿಮೇಲೆ ಬೆರಳಿಟ್ಟು ಮಾತಾಡುವಂತಾಯಿತು.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ಡಿಸ್ಕ್ಲೈಮರ್:-ಈ ಪತ್ರಿಕೆಯಲ್ಲಿ ಪ್ರಕಟವಾಗುವ ಸುದ್ದಿ, ಅಭಿಪ್ರಾಯಗಳು, ಚಿತ್ರಗಳು ಹಾಗೂ ಮಾಹಿತಿಗಳು ವಿಶ್ವಾಸಾರ್ಹ ಮೂಲಗಳ ಆಧಾರದ ಮೇಲೆ ಸಾರ್ವಜನಿಕ ಹಿತಾಸಕ್ತಿ ಮತ್ತು ಜಾಗೃತಿಗಾಗಿ ಮಾತ್ರ ಪ್ರಕಟಿಸಲ್ಪಟ್ಟಿವೆ. ಯಾವುದೇ ವ್ಯಕ್ತಿ, ಸಂಸ್ಥೆ ಅಥವಾ ಸಮುದಾಯವನ್ನು ಅವಹೇಳನಗೊಳಿಸುವ, ಅವಮಾನ ಮಾಡುವ ಅಥವಾ ಖಾಸಗಿ ಹಕ್ಕಿಗೆ ಧಕ್ಕೆ ತರುವ ಉದ್ದೇಶ ಇಲ್ಲ.

ಅಂಕಲಗಿಯಲ್ಲಿ ಅಂಜನಿಪುತ್ರನ ಮೂರ್ತಿ ಪ್ರತಿಷ್ಠಾಪನೆ! ಮಲ್ಲಿಕಾರ್ಜುನರ ಜಾತ್ರಾ ನಿಮಿತ್ಯ ಮುತ್ತೈದೆಯರಿಗೆ ಉಡಿತುಂಬಿದ ಶ್ರೀಗಳು



ಅಫಜಲಪುರ,ಮಾ.15-

ತಾಲೂಕಿನ ಅಂಕಲಗಿ ಗ್ರಾಮದಲ್ಲಿರುವ ಗ್ರಾಮದೇವ ಮಲ್ಲಿಕಾರ್ಜುನ ದೇವಸ್ಥಾನದ ಜಾತ್ರಾ ನಿಮಿತ್ಯ ಗ್ರಾಮದಲ್ಲಿ ಹನುಮಾನ ಮಂದಿರ ಲೋಕಾರ್ಪಣೆ ಹಾಗೂ ಮೂರ್ತಿ ಪ್ರತಿಷ್ಠಾಪನಾ ಕಾರ್ಯಕ್ರಮದ ನಿಮಿತ್ಯ 1008 ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮ ಅದ್ದೂರಿಯಾಗಿ ಜರುಗಿತು.


ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದ ಡಾ.ಚನ್ನಮಲ್ಲ ಶಿವಾಚಾರ್ಯರು ಅಂಕಲಗಾ ಗ್ರಾಮದಲ್ಲಿ ಪ್ರತಿವರ್ಷದಂತೆ ಈ ವರ್ಷವೂ ಕೂಡಾ ಮಲ್ಲಿಕಾರ್ಜುನ ದೇವಸ್ಥಾನದ ಜಾತ್ರೆಯ ನಡೆಯುತ್ತಿದ್ದು,ಯುಗಾದಿ ಹಬ್ಬದಂದು ನಡೆಯುವ ಜಾತ್ರೆಯು ಈ ಬಾರಿ ಹನುಮಾನ್ ದೇವಸ್ಥಾನದ ಲೋಕಾರ್ಪಣೆ ಕಾರ್ಯಕ್ರಮದ ನಿಮಿತ್ಯ ಇಂದಿನಿಂದ ಪ್ರಾರಂಭವಾಗಿರುವುದು ಗ್ರಾಮದಲ್ಲಿ ಸಡಗರದ ವಾತಾವರಣ ಉಂಟುಮಾಡಿದೆ.ಗ್ರಾಮದಲ್ಲಿರುವ ಜನರು ದೇವರ ಮೇಲೆ ಭಕ್ತಿಭಾವದಿಂದ ನಡೆದುಕೊಂಡಾಗ ಆ ಗ್ರಾಮದಲ್ಲಿ ಯಾವುದೇ ಗದ್ದಲ ಗಲಾಟೆಗಳಿಗೆ ಅವಕಾಶವಿರುವುದಿಲ್ಲ.ಅಂಕಲಗಾ ಗ್ರಾಮದ ಸದ್ಭಕ್ತರು ಧಾರ್ಮಿಕತೆಗೆ ಹೆಚ್ಚಿನ ಆದ್ಯತೆ ನೀಡುವಂತವರಾಗಿದ್ದು,ಗ್ರಾಮದ ಎಲ್ಲಾ ಜನರಿಗೂ ಹನುಮಂತ ಮಲ್ಲಿಕಾರ್ಜುನ ದೇವರು ಸಕಲ ಸೌಲಭ್ಯಗಳು ಕರುಣಿಸಲ ಶಾಂತಿ ಸೌಹಾರ್ದತೆ ನೆಲೆಸಲಿ ಎಂದು ಆಶೀರ್ವದಿಸಿದರು.

ತದನಂತರ ಮಾತನಾಡಿದ ಷ.ಬ್ರ.ವಿಶ್ವಾರಾಧ್ಯ ಮಳೇಂದ್ರ ಶಿವಾಚಾರ್ಯರು ಅಂಕಲಗಾ ಗ್ರಾಮಸ್ಥರು ನಿಜಕ್ಕೂ ಪೂಣ್ಯವಂತರಾಗಿದ್ದಾರೆ.ಏಕೆಂದರೆ ದೈವಿಶಕ್ತಿಗೆ ಹೆಚ್ಚಿನ ಆದ್ಯತೆ ನೀಡಿ ಸಂಸ್ಕಾರವಂತ ಕುಟುಂಬಗಳಿಗೆ ಸಾಕ್ಷಿಯಾಗಿರುವ ಗ್ರಾಮ ಇದಾಗಿದೆ.ಕಷ್ಟ ಯಾರನ್ನು ಬಿಟ್ಟಿಲ್ಲ ಎನ್ನುವುದಕ್ಕೆ ಶಿವನಿಗೆ ಶನಿದೇವರು ಕಾಡಿದ ಉದಾಹರಣೆ ತಿಳಿಸಿದರು.ಕಷ್ಟಗಳು ಮನುಷ್ಯರಿಗೆ ಸಹಜವಾಗಿದ್ದು,ಅದನ್ನು ಎದುರಿಸಿ ಸುಖಿ ಜೀವನ ನಡೆಸುವ ಶಕ್ತಿ ದೇವರು ಕರಣಿಸಲಿ ಎನ್ನುವುದು ಮನುಷ್ಯನ ಸ್ವಾಭಾವಿಕ ಗುಣವಾಗಿರಬೇಕೆ ಹೊರತು ಯಾರನ್ನೂ ದ್ವೇಷಿಸುವಂತಿರಬಾರದು ಎಂದರು.ಪ್ರತಿ ಗ್ರಾಮದಲ್ಲಿಯೂ ಹನುಮಾನ್ ದೇವಸ್ಥಾನ ಇರುವುದು ನಮ್ಮೆಲ್ಲರ ಕಷ್ಟಗಳನ್ನು ಪರಿಹರಿಸಿ ಗ್ರಾಮದ ಒಳಗಡೆ ದುಷ್ಟಶಕ್ತಿಗಳಿಗೆ ಬಿಡದಂತೆ ಕಾಯುವ ಶಕ್ತಿ ಹನುಮಂತನಲ್ಲಿದೆ ಎನ್ನುವ ಕಾರಣಕ್ಕೆ.ಆದ್ದರಿಂದ ಗ್ರಾಮದಲ್ಲಿ ನೂತನವಾಗಿ ಹನುಮಾನ ಮಂದಿರ ನಿರ್ಮಾಣ ಮಾಡಿರುವುದು ಸಂತಸ ತಂದಿದೆ.ನಿಮ್ಮೆಲ್ಲರಿಗೂ ಒಳ್ಳೆಯದಾಗಲಿ ಎಂದು ಹಾರೈಸಿದರು.

ತದನಂತರ ಮಾತನಾಡಿದ ಶಾಸಕ ಎಮ್.ವೈ.ಪಾಟೀಲ ಅಂಕಲಗಾ ಗ್ರಾಮದ ತಾಯಂದಿರಿಗೆ ಇಂದು ಹನುಮಾನ ದೇವಸ್ಥಾನದ ಲೋಕಾರ್ಪಣೆ ಕಾರ್ಯಕ್ರಮದ ನಿಮಿತ್ಯ ಉಡಿತುಂಬುವ ಕಾರ್ಯಕ್ರಮ ಆಯೋಜನೆ ಮಾಡಿರುವುದು ಸಂತಸ ತಂದಿದೆ.ಯಾವ ಗ್ರಾಮದಲ್ಲಿ ಧಾರ್ಮಿಕತೆಗೆ ಹೆಚ್ಚು ಆದ್ಯತೆ ನಿಡುತ್ತಾರೊ ಆ ಗ್ರಾಮದಲ್ಲಿ ಶಾಂತಿ ನೆಲೆಸುತ್ತದೆ ಎನ್ನುವುದಕ್ಕೆ ಅಂಕಲಗಾ ಗ್ರಾಮವೇ ಸಾಕ್ಷಿ.ವ್ಯಸನಗಳಿಗೆ ಬಲಿಯಾಗುವ ಈ ಕಾಲದಲ್ಲಿ ದೈವಿಶಕ್ತಿಗೆ ಆದ್ಯತೆ ನೀಡಿ ಸರ್ವಧರ್ಮಿಯರು ಸಹಬಾಳ್ವೆಯಿಂದ ಮಲ್ಲಿಕಾರ್ಜುನ ದೇವರ ಜಾತ್ರೆ ಮಾಡುತ್ತಿರುವುದು ಸಂತಸ ತಂದಿದೆ ಎಂದರು.ತದನಂತರ ಉಭಯ ಶ್ರೀಗಳ ಸಾನಿಧ್ಯದಲ್ಲಿ ನೂರಾರು ಜನ ಮುತ್ತೈದೆಯರಿಗೆ ಉಡಿತುಂಬುವ ಕಾರ್ಯಕ್ರಮ ನೆರವೇರಿಸಲಾಯಿತು.

ಇದೆ ಸಂದರ್ಭದಲ್ಲಿ ಗ್ರಾಮದ ಮುಖಂಡರಾದ ಬಸವಣ್ಣಪ್ಪಾ ಪಾಟೀಲ,ಸೈಬಗೌಡ ಮೇಲಗೇರ,ಅಣ್ಣಾರಾವ್ ಪಡಶೆಟ್ಟಿ,ಶಿವಶರಣಪ್ಪ ಪಾಟೀಲ,ಶಿವಬಸಪ್ಪ ಪಾಟೀಲ, ಹಣಮಂತರಾವ್ ಪಾಟೀಲ, ಶರಣು ಪಡಶೆಟ್ಟಿ,ಮಲ್ಲಿಕಾರ್ಜುನ ಪಡಶೆಟ್ಟಿ,,ಸೇರಿದಂತೆ ಹಲವರು ಉಪಸ್ಥಿತರಿದ್ದರು.

ನಾಡಂಗ : ಆಕಸ್ಮಿಕ ಬೆಂಕಿಗೆ 8 ತಿಪ್ಪೆಗಳು ಭಸ್ಮ



ಸಿರುಗುಪ್ಪ - ತಾಲೂಕು ನಾಡಂಗ್ ಗ್ರಾಮದಲ್ಲಿ ಆಕಸ್ಮಿಕ ಬೆಂಕಿಯಿಂದ ಎಂಟು ತಿಪ್ಪೆಗಳಿಗೆ ತಗುಲಿ ಆಹುತಿಯಾಗಿ ಭಸ್ಮಗೊಂಡವು ಸ್ಥಳಕ್ಕೆ ಅಗ್ನಿಶಾಮಕ ಠಾಣೆಯ ದಳ ದ ಸಿಬ್ಬಂದಿಯವರು ಬೆಂಕಿಯನ್ನು ನಂದಿಸಿದರು ಸಹಾಯಕ ಠಾಣಾಧಿಕಾರಿ ಚಂದ್ರಣ್ಣ ಸಿಬ್ಬಂದಿಗಳಾದ ವೆಂಕಟೇಶ್ ರಾಜಾಭಕ್ಷಿ ಶರಣು ಪುಲಿ ಶೇಖರ್ ಮಂಜುನಾಥ ಮತ್ತಿತರರು ಇದ್ದರು.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR